ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 98

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER


ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 24-03-2026

## ಕೌಶಲ್ಯ ಭಾರತ ಎನ್ನುವ ಶೀರ್ಷಿಕೆ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ: ಡಾ. ಜೆ.ಎಲ್.ಈರಣ್ಣ




ಧೈರ್ಯದ ದಾರಿ

**ಮಾನ್ವಿ :** ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜ್‌ನಲ್ಲಿ ಉದ್ಯೋಗ ಭರವಸೆ ಕೋಶ ಹಾಗೂ ಸಂಭವ ಪೌಂಡೇಶನ್ ಬೆಂಗಳೂರು ಸಹಯೋಗದಲ್ಲಿ ನಡೆದ ಕೃತಕ ಬುದ್ಧಿಮತ್ತೆ ,ಎ.ಐ, ಶಾರ್ಟ ಟರ್ಮ್ ಕೋರ್ಸ್ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ಕಾರ್ಯಗಾರಕ್ಕೆ ಚಾಲನೆ ನೀಡಿ ಕಾಲೇಜಿನ ಪ್ರಾಚಾರ್ಯರಾದ ಡಾ. ಜೆ.ಎಲ್.ಈರಣ್ಣ ಮಾತನಾಡಿ ಪ್ರಸ್ತುತ ಸಮಾಜದಲ್ಲಿ ವಿದ್ಯಾರ್ಥಿಗಳು ಉನ್ನತವಾದ ಜೀವನವನ್ನು ರೂಪಿಸಿಕೊಳ್ಳುವುದಕ್ಕೆ ಇಂದು ಕಂಪ್ಯೂಟರ್ ಜ್ಞಾನ ಹಾಗೂ ಎ.ಐ.ಸ್ಮಾರ್ಟ ಕೋರ್ಸ್ಗಳ ಬಗ್ಗೆ ಅಗತ್ಯವಾದ ಜ್ಞಾನವನ್ನು ನೀಡುವುದಕ್ಕಾಗಿ ಕೌಶಲ್ಯ ಭಾರತ ಎನ್ನುವ ಶೀರ್ಷಿಕೆ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯಧಾರಿತವಾದ ಕಾರ್ಯಗಾರಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ವಿದ್ಯಾರ್ಥಿಗಳು ಕಾರ್ಯಗಾರದ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕರೆ ನೀಡಿದರು.

ಬೆಂಗಳೂರಿನ ಸಂಭವ ಫೌಂಡೇಶನ್ 2ನೇಪುಟಕ್ಕೆ►

## ಉಪಚುನಾವಣೆ ಗೆಲ್ಲಲು ಸಿಎಂ-ಡಿಸಿಎಂ ಒಗ್ಗಟ್ಟಿನ ಜಪ

**ಬೆಂಗಳೂರು, ಮಾ. 23–** ರಾಜ್ಯದಲ್ಲಿ ಬೇಸಿಗೆಯ ಬಿಸಿಲಿನ ಝಳ ಏರುತ್ತಿರುವಾಗಲೇ ಉಪಚುನಾವಣೆಯ ಕಾವು ಏರ ತೊಡಗಿದ್ದು, ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ನಾಮಪತ್ರ ಸಲ್ಲಿಕೆ ಭರಾಟೆ ಜೋರಾಗಿದೆ.

ಈ ಎರಡು ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆಗೆ ಇಂದು ಕೊನೆಯ ದಿನವಾಗಿದ್ದು, ಆಡಳಿತರೂಢ ಕಾಂಗ್ರೆಸ್ ಮತ್ತು ವಿಪಕ್ಷವಾದ ಬಿಜೆಪಿ ಅಭ್ಯರ್ಥಿಗಳು ಎರಡು ಕ್ಷೇತ್ರಗಳಲ್ಲೂ ಇಂದು ಬಿ ಫಾರಂ ಸಮೇತ ತಮ್ಮ ಉಮೇದುವಾರಿಕೆಗಳನ್ನು ಸಲ್ಲಿಸಿದ್ದು, ಉಪಚುನಾವಣೆಗೆ ಅಖಾಡ ಸಜ್ಜಾಗಿದೆ.

ಈ ಎರಡು ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆಯು ಆಡಳಿತರೂಢ ಕಾಂಗ್ರೆಸ್ ಮತ್ತು ವಿಪಕ್ಷ ಬಿಜೆಪಿಯ ಶಕ್ತಿ ಪ್ರದರ್ಶನಕ್ಕೂ ವೇದಿಕೆಯಾಗಿದ್ದು, ಎರಡೂ ಪಕ್ಷಗಳ ಅಭ್ಯರ್ಥಿಗಳು ದೊಡ್ಡ ಸಂಖ್ಯೆಯಲ್ಲಿ ಬೆಂಬಲಿಗರೊಂದಿಗೆ ಆಗಮಿಸಿ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.



ಕಾಂಗ್ರೆಸ್ ಪಕ್ಷ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಸಚಿವರು, ಪ್ರಮುಖ ಮುಖಂಡರುಗಳು ಉಪಸ್ಥಿತರಿದ್ದು, ನಾಮಪತ್ರ ಸಲ್ಲಿಕೆಯ ಶಕ್ತಿ ಪ್ರದರ್ಶನಕ್ಕೆ ಸಾಕ್ಷಿಯಾದರು.

ಬಿಜೆಪಿ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಬಿಜೆಪಿ ಪ್ರಮುಖ ನಾಯಕರುಗಳು ಉಪಸ್ಥಿತರಿದ್ದು, ಉಪಚುನಾವಣೆಯ ಜಿದ್ದಾಜಿದ್ದಿನ ಹೋರಾಟಕ್ಕೆ ಪುಷ್ಠಿ ನೀಡಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿರುವ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಪುತ್ರ ಹಾಗೂ ದಿ. ಶಾಮನೂರು ಶಿವಶಂಕರಪ್ಪನವರ ಮೊಮ್ಮಗ ಸಮರ್ಥ್ ಮಲ್ಲಿಕಾರ್ಜುನ್ ಅಪಾರ ಬೆಂಬಲಿಗರೊಂದಿಗೆ ಆಗಮಿಸಿ ನಾಮಪತ್ರ ಸಲ್ಲಿಸಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀನಿವಾಸದಾಸ ಕರಿಯಪ್ಪ ಅವರು ತಮ್ಮ ನೂರಾರು ಬೆಂಬಲಿಗರೊಂದಿಗೆ ಮೆರವಣಿಗೆ ನಡೆಸಿ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಸೇರಿದಂತೆ ಕಾಂಗ್ರೆಸ್‌ನ ಹಲವು ಪ್ರಮುಖ ನಾಯಕರುಗಳು ಉಪಸ್ಥಿತರಿದ್ದರು.

ಬಿಜೆಪಿಯ ಅಭ್ಯರ್ಥಿ ಶ್ರೀನಿವಾಸ ದಾಸ ಕರಿಯಪ್ಪನವರು ಇಂದು ದೊಡ್ಡ ಸಂಖ್ಯೆಯಲ್ಲಿ ಬೆಂಬಲಿಗರೊಂದಿಗೆ ಆಗಮಿಸಿ ನಾಮಪತ್ರ ಸಲ್ಲಿಸಿದರು.ಈ ಕ್ಷೇತ್ರದಲ್ಲಿ ಈ ಇಬ್ಬರು ಅಭ್ಯರ್ಥಿಗಳು ಕಳೆದ ಶುಕ್ರವಾದ ಶುಭದಿನವೆಂದು ನಾಮಪತ್ರ ಸಲ್ಲಿಕೆ ಮಾಡಿದ್ದರು. ಇಂದು ಪಕ್ಷದ ಬಿ ಫಾರಂ ಸಮೇತ ಅಧಿಕೃತವಾಗಿ ಪಕ್ಷದ ಅಭ್ಯರ್ಥಿಯಾಗಿ ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು.

**ಬಾಗಲಕೋಟೆಯಲ್ಲೂ ನಾಮಪತ್ರ–** ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ 2ನೇಪುಟಕ್ಕೆ

## ರಾಯಚೂರಿನ ಜಿಲ್ಲಾಡಳಿತದಿಂದ ದೇವರ ದಾಸಿಮಯ್ಯ ಜಯಂತ್ಯುತ್ಸವ

**ರಾಯಚೂರು ಮಾ,23–** ಸರಳ ಭಾಷೆಯಲ್ಲಿ ಸರ್ವರೂ ಅರಿಯುವಂತೆ ವಚನಗಳನ್ನು ರಚಿಸಿದ ಆದ್ಯ ವಚನಕಾರ, ನೇಕಾರ ಸಂತ ವಿಶ್ವಮಾನ್ಯ ಶರಣ ದೇವರ ದಾಸಿಮಯ್ಯ ಅವರು ಸ್ವಸ್ಥ ಸಮಾಜ ನಿರ್ಮಾಣದ ಆಶಯದೊಂದಿಗೆ ನಮಗೆಲ್ಲ ಸನ್ಮಾರ್ಗ ತೋರಿದ್ದಾರೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಹೇಳಿದರು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಮಾರ್ಚ್ 23ರ ಸೋಮವಾರ ನಡೆದ ಶ್ರೀ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಮಾಜದಲ್ಲಿ ಎಲ್ಲರೂ ಒಂದೇ ಆಗಿದ್ದಾರೆ. ಇಲ್ಲಿ ಜಾತಿ, ಲಿಂಗ, ಧರ್ಮ ಹಾಗೂ ವರ್ಣ ಬೇಧವಿಲ್ಲ. ಎಲ್ಲರೂ ಸಮನಾಗಿ, ಉತ್ತಮ ಜೀವನವನ್ನು ನಡೆಸಬೇಕೆಂಬ ಸಂದೇಶಗಳನ್ನು ತಮ್ಮ ವಚನಗಳ ಮೂಲಕ ಇಡೀ ಜಗತ್ತಿಗೆ ದಾಸಿಮಯ್ಯ ಅವರು ತಿಳಿಸಿದ್ದು, ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಬದುಕನ್ನು ರೂಪಿಸಿಕೊಳ್ಳಬೇಕು ಎಂದರು.

ರಾಯಚೂರು ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಶಾವಂತಗೇರಾ ಅವರು ಮಾತನಾಡಿ, ವಿಶ್ವ ಹಾಗೂ ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯದ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಅವರು ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ






ಇಲಾಖೆಯಿಂದ ಒಂದು ವರ್ಷದಲ್ಲಿ ಸುಮಾರು 33 ಜಯಂತಿಗಳನ್ನು ಆಚರಣೆ ಮಾಡಲಾಗುತ್ತದೆ. ಅದರಲ್ಲಿ ದೇವರದಾಸಿಮಯ್ಯ ಜಯಂತಿಯೂ ಒಂದಾಗಿದ್ದು, ದೇವರ ದಾಸಿಮಯ್ಯನವರು ವಚನ ಸಂಗ್ರಹ ಹೊತ್ತಿಗೆಯ ಮೂಲಕ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾರೆ. ರಾಮನಾಥ ಎಂಬ ಅಂಕಿತದಿಂದ ಹಲವು ವಚನಗಳನ್ನು ರಚಿಸಿ, ಸಮಾಜಕ್ಕೆ ಉತ್ತಮ ಹಾದಿಯನ್ನು ಹಾಕಿಕೊಟ್ಟಿದ್ದಾರೆ ಎಂದರು.

ಈ ವೇಳೆ ಉಪನ್ಯಾಸಕರಾಗಿ ಜಿಲ್ಲೆಯ ಮಾನ್ವಿ ಪಟ್ಟಣದ ಸಾಹಿತಿ ರಮೇಶಬಾಬು ಯಾಳಗಿ ಅವರು ಮಾತನಾಡಿ, ದಾಸಿಮಯ್ಯ ಜಯಂತಿ ಕೇವಲ ಒಂದು ಸಮಾಜಕ್ಕೆ ಸೀಮಿತವಾಗದೇ. ಇಡೀ ಮನುಕುಲಕ್ಕೆ ಸಂಭ್ರಮದ ಹಬ್ಬವಾಗಬೇಕು. ಪ್ರತಿಯೊಬ್ಬರ ಬಾಳನ್ನು ಬೆಳಗಿಸುವ ಸದ್ಗುಣಗಳು ವಚನಗಳಲ್ಲಿ ಅಡಗಿದ್ದು, ವರ್ತನೆಗಳನ್ನು ಸರಿಪಡಿಸುವ, ಸರಿದಾರಿಯಲ್ಲಿ ನಡೆಯಲು ವಚನಗಳು ಸಹಕಾರಿಯಾಗಿವೆ ಎಂದು ಹೇಳಿದರು.

ದೇವರ ದಾಸಿಮಯ್ಯ ಅವರು ವಚನಗಳ ಮೂಲಕ ಸಾಮಾಜಿಕ ಅಸಮಾನತೆ ಹೋಗಲಾಡಿಸಲು ಶ್ರಮಿಸಿದರು. ಅವರ 176 ವಚನಗಳು ಇದುವರೆಗೂ ಲಭ್ಯವಾಗಿವೆ. ದಾಸಿಮಯ್ಯನವರ ವಚನಗಳ ಸಾರವನ್ನು ಮಕ್ಕಳಿಗೆ ಯುವಜನತೆಗೆ ತಿಳಿಸಿ ಸುಸಂಸ್ಕೃತರನ್ನಾಗಿ ಮಾಡಬೇಕು ಎಂದರು.


ನೇಯ್ಗೆ ವೃತ್ತಿಯನ್ನು ಮಾಡುತ್ತಿದ್ದ ದೇವರ ದಾಸಿಮಯ್ಯ ತಮ್ಮ ವಚನಗಳಲ್ಲಿ ಕಾಯಕ, ಭಕ್ತಿ, ಜ್ಞಾನ, ಸರಳತೆ, ವೈರಾಗ್ಯ, ಮುಕ್ತಿಗೆ ಪ್ರಾಧಾನ್ಯತೆ ನೀಡಿದ್ದಾರೆ. 12ನೇ ಶತಮಾನದಲ್ಲಿ ಆರಂಭವಾದ ವಚನ ಚಳವಳಿಗಿಂತ ಮೊದಲೇ ಸರಳ ವಚನಗಳನ್ನು ರಚಿಸಿದ ಆದ್ಯ ವಚನಕಾರ ಎಂಬ ಹೆಗ್ಗಳಿಕೆಗೆ ದಾಸಿಮಯ್ಯ ಪಾತ್ರರಾಗಿದ್ದಾರೆ. ಕನ್ನಡ ಸಾಹಿತ್ಯಕ್ಕೆ ಮೂಲವಾಗಿರುವ ವಚನ ಸಾಹಿತ್ಯದಿಂದ ಕನ್ನಡ ಸಾಹಿತ್ಯ ಶ್ರೀಮಂತಗೊಂಡಿದೆ. ಇದಕ್ಕೆ ದೇವರ ದಾಸಿಮಯ್ಯ ಕಾರಣಕರ್ತರು ಎಂದರು.

ದೇವರ ದಾಸಿಮಯ್ಯ ವಚನಗಳ ಆದರ್ಶ ಹಾಗೂ ಮೌಲ್ಯಗಳನ್ನು ಪೋಷಕರು ಮಕ್ಕಳಲ್ಲಿ ತುಂಬಬೇಕು. ಶ್ರೀಮಂತಿಕೆಯ ಜೀವನಕ್ಕಿಂತ ಶ್ರೀಮಂತ ಸಂಸ್ಕೃತಿ ಮಕ್ಕಳಿಗೆ ಕಲಿಸಬೇಕಾಗಿದೆ. ಮಹಾನ್ ಸಾಧಕರ ನಡೆನುಡಿಗಳನ್ನು ಅರ್ಥೈಸಬೇಕು ಎಂದರು.

ದೇವರ ದಾಸಿಮಯ್ಯ ಭಾವಚಿತ್ರ ಮೆರವಣಿಗೆಗೆ 2ನೇಪುಟಕ್ಕೆ

## ಸಿರವಾರ ಪಟ್ಟಣ ಪಂಚಾಯತ್‌ನಲ್ಲಿ ಆದ್ಯ ವಚನಕಾರ ದೇವರ ದಾಸಿಮಯ್ಯ ಜಯಂತಿ ಆಚರಣೆ





ಧೈರ್ಯದ ದಾರಿ

**ಸಿರವಾರ:**ಸಿರವಾರ ಸ್ಥಳೀಯ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಇಂದು ಶರಣ ಸಂಸ್ಕೃತಿಯ ಪ್ರವರ್ತಕ ಹಾಗೂ ಆದ್ಯ ವಚನಕಾರ ಶ್ರೀ ಜೇಡರ ದಾಸಿಮಯ್ಯ (ದೇವರ ದಾಸಿಮಯ್ಯ) ಅವರ ಜಯಂತಿಯನ್ನು ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ದಾಸಿಮಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ನಮನಗಳನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಅಧ್ಯಕ್ಷರು, ಮುಖ್ಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಅಧ್ಯಕ್ಷರಾದ ಹಾಜಿ ಚೌದರಿ ಅವರ ನುಡಿ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಹಾಜಿ ಚೌದರಿ ಅವರು, "12ನೇ ಶತಮಾನದ ಶ್ರೇಷ್ಠ ಶಿವಶರಣರಾದ ದೇವರ ದಾಸಿಮಯ್ಯನವರು ತಮ್ಮ ವಚನಗಳ ಮೂಲಕ ಸಮಾಜಕ್ಕೆ ಸಮಾನತೆಯ ಸಂದೇಶ ನೀಡಿದವರು. ಅವರು ಹಾಕಿಕೊಟ್ಟಿರುವ ಆದರ್ಶಗಳನ್ನು ಮತ್ತು ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಕರೆ ನೀಡಿದರು.

ಮುಖ್ಯ ಅಧಿಕಾರಿಗಳ ಭಾಷಣ

ಪಟ್ಟಣ ಪಂಚಾಯತ್‌ನ ಮುಖ್ಯ ಅಧಿಕಾರಿಗಳು ಮಾತನಾಡಿ, "ದೇವರ ದಾಸಿಮಯ್ಯನವರು 12ನೇ ಶತಮಾನದ ವಚನ ಚಳವಳಿಯ ಪ್ರಮುಖ ವಚನಕಾರರು. ಕಾಯಕವೇ ಕೈಲಾಸ ಎಂಬ ತತ್ವಕ್ಕೆ ಆದ್ಯತೆ ನೀಡಿದ ಅವರ ವಿಚಾರಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿವೆ," ಎಂದು ಸ್ಮರಿಸಿದರು.

ಆದರ್ಶಗಳ ಪಾಲನೆ: ದಾಸಿಮಯ್ಯನವರ ಬದುಕು ಮತ್ತು ಬರಹಗಳು ಸಮಾಜದ ಪ್ರತಿಯೊಂದು ವರ್ಗಕ್ಕೂ ಸ್ಫೂರ್ತಿದಾಯಕವಾಗಿದ್ದು, ಅವರ ಮಾನವೀಯ ಮೌಲ್ಯಗಳ ಪಾಲನೆ ಇಂದಿನ ಅಗತ್ಯವಾಗಿದೆ ಎಂದು ಗಣ್ಯರು ಅಭಿಪ್ರಾಯಪಟ್ಟರು.

**ಸಾಮಾಜಿಕ ಕಳಕಳಿ:** ಅಸಮಾನತೆ ಅಳಿದು ಹೋದಾಗ ಮಾತ್ರ ಸುಸ್ಥಿರ ಸಮಾಜದ ನಿರ್ಮಾಣ ಸಾಧ್ಯ ಎಂಬ ಶರಣರ ಆಶಯವನ್ನು ಮೆಲುಕು ಹಾಕಲಾಯಿತು.

**ಗಣ್ಯರ ಉಪಸ್ಥಿತಿ–** ಈ ಸಮಾರಂಭದಲ್ಲಿ ಪಟ್ಟಣ ಪಂಚಾಯತ್‌ನ ಉಪಾಧ್ಯಕ್ಷರಾದ ಲಕ್ಷ್ಮಿ ಆದೆಪ್ಪ ನಾಯಕ್. ಪಟ್ಟಣ ಪಂಚಾಯತ್ ಸದಸ್ಯರಾದ ವರ್ಚಸ್ ಮೌಲಸಾಬ್. ಹಸೇನ್ ಅಲಿ ಸಾಬ್. ಹಾಗೂ ಸಮಾಜದ ಮುಖಂಡರು.ಹಿರಿಯ ಅಧಿಕಾರಿಗಳು

## ಸಂವಿಧಾನದ ಕಡೆಗೆ ನಮ್ಮ ನಡಿಗೆ: ಮಾನ್ವಿಯಲ್ಲಿ ಜಾಗೃತಿ ಜಾಥ

ಧೈರ್ಯದ ದಾರಿ




**ಮಾನ್ವಿ :** ಪಟ್ಟಣದ ಟೌನ್ ಹಾಲ್ ಸಭಾಂಗಣದಲ್ಲಿ ಜನಜಾಗೃತಿ ಮಹಿಳಾ ಸಂಘಟನೆ ಪೋತ್ನಾಳ ವತಿಯಿಂದ ನಡೆದ ಸಂವಿಧಾನದ ಕಡೆಗೆ ನಮ್ಮ ನಡಿಗೆ , ನಮ್ಮ ಸಂವಿಧಾನದ ವಾಗ್ದಾನ ಮಹಿಳೆಯರಿಗೆ ವರದಾನ ಕಾರ್ಯಕ್ರಮವನ್ನು ಮಾನ್ವಿ ತಾಲೂಕು ಮಹಿಳಾ ಸಾಂತ್ವನ ಕೇಂದ್ರದ ಮುಖ್ಯಸ್ಥರಾದ ಶಂಕ್ರಮ್ಮ ಉದ್ಘಾಟಿಸಿ ಮಾತನಾಡಿ ಭಾರತದ ಸಂವಿಧಾನದಲ್ಲಿ ಮಹಿಳೆಯರಿಗೆ ಸಮಾನವಾದ ಹಕ್ಕುಗಳನ್ನು ರಕ್ಷಣೆಯನ್ನು ನೀಡಲಾಗಿದ್ದರು ಕೂಡ ಅವುಗಳ ಬಗ್ಗೆ ಮಹಿಳೆಯರಿಗೆ ಮಾಹಿತಿಯ ಕೊರತೆಯಿಂದಾಗಿ ಇಂದಿಗೂ ಕೂಡ ಶೋಷಣೆಗೆ ಒಳಗಾಗುವಂತಾಗಿದೆ ಇಂದಿನ ಅಧುನಿಕ ಯುಗದಲ್ಲಿಯೂ ಕೂಡ ಮಹಿಳೆಯರು ಸಾಮಾಜಿಕ ಜಾಲತಾಣಗಳ ಮೂಲಕ ,ಅನ್ ಲೈನ್‌ಗಳಲ್ಲಿ ಮಾನಸಿಕ ಹಿಂಸೆಯನ್ನು,ಕಿರುಕುಳವನ್ನು ಅನುಭವಿಸುತ್ತಿದ್ದಾಳೆ ,ಸಾರ್ವಜನಿಕ ಸ್ಥಳಗಳಲ್ಲಿ ಕೂಡ ಮಾನಸಿಕ, ದೈಹಿಕ ಕಿರುಕುಳವನ್ನು ಅನುಭವಿಸುತ್ತಿದ್ದಾಳೆ.ಕೌಟುಂಬಿಕ ದೌರ್ಜನ್ಯ,ಧಾರ್ಮಿಕ ಆಧಾರಿತವಾಗಿ ಶೋಷಣೆಯನ್ನು ಅನುಭವಿಸುತ್ತಿರುವುದನ್ನು ಕಾಣಬಹುದು, ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯ,ಬಾಲ್ಯವಿವಾಹ, ಬಾಲಕಾರ್ಮಿಕ ಪದ್ದತಿಗಳಿಂದ ರಕ್ಷಣೆಯನ್ನು ಸಂವಿಧಾನದ ಮೂಲಕ ಮಾತ್ರ ಮಹಿಳೆಯರ ಸಬಲೀಕರಣ ರಕ್ಷಣೆ ಮತ್ತು ಸಮಗ್ರ ಕಲ್ಯಾಣಸಾಧ್ಯವಿದೆ ಮಹಿಳೆಯರು ಸಂಘಟಿತರದಾಗ ಮಾತ್ರ ತಮ್ಮ ಸಮಸ್ಯೆಗಳಿಗೆ ಪರಿಹಾರವನ್ನು ಕಂಡು ಕೊಳ್ಳುವುದಕ್ಕೆ ಸಾಧ್ಯವಿದೆ ಎಂದು ತಿಳಿಸಿದರು.

ಜನಜಾಗೃತಿ ಮಹಿಳ ಸಂಘಟನೆ ಅಧ್ಯಕ್ಷರಾದ ಚಿನ್ನಮ್ಮ ಮುದ್ದನಗುಡ್ಡಿ ಮಾತನಾಡಿ ಜನಜಾಗೃತಿ ಮಹಿಳ ಸಂಘಟನೆ ವತಿಯಿಂದ ಕಳೆದ 25 ವರ್ಷಗಳಿಂದ ತಾಲೂಕಿನಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ, ಕುಟುಂಬ ಹಿಂಸೆ, ಬಾಲ್ಯ ವಿವಾಹ ಸೇರಿದಂತೆ ಸಾಮಾಜಿಕ ಶೋಷಣೆಯ ವಿರುದ್ದ ಹೋರಾಟ ನಡೆಸುತ್ತ ಬಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕು. ವಂದಿತಾ ಚಿಮ್ಮಲಪೂರ್ ರವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ತಾಲೂಕಿನ ವಿವಿಧ ವಲಯಗಳ ಸದಸ್ಯರನ್ನು ಸನ್ಮಾನಿಸಲಾಯಿತು.

ಪಟ್ಟಣದ ಬಸವ ವೃತ್ತದಿಂದ ಟೌನ್ ಹಾಲ್ ವರೆಗೆ ಸಂವಿಧಾನದ ಕಡೆಗೆ ನಮ್ಮ ನಡಿಗೆ, ಜನಜಾಗೃತಿ ಜಾಥ ನಡೆಸಲಾಯಿತು.

ರಾಯಚೂರು ಜಿಲ್ಲಾ ಜಾಮಾತೆ ಇಸ್ಲಾಂ ಸಿ.ಐ.ಓ. ಜಿಲ್ಲಾಧ್ಯಕ್ಷರಾದ ನಾಜೀಯಾ ಬೇಗಂ, ಲಿಂಗಸೂಗುರಿನ ನವಜೀವನ ಮಹಿಳಾ ಒಕ್ಕೂಟದ ಅಧ್ಯಕ್ಷರಾದ ಶಾಂಭವಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿ ಶಿವಲಕ್ಷ್ಮೀ, ಅನ್ನಪೂರ್ಣ, ಸುಜಾತ, ಮರಿಯಮ್ಮ, ಚೆನ್ನಮ್ಮ, ಸುನಂದಮ್ಮ, ದೇವಪುತ್ರ, ಕರಿಯಪ್ಪ ಮುದ್ದಿನಗುಡ್ಡಿ, ಮೌನೇಶ ತಡಕಲ್, ಸೇರಿದಂತೆ ಇನ್ನಿತರರು ಇದ್ದರು.

**ಮೊದಲನೇ ಪುಟದಿಂದ**

# ಉಪಚುನಾವಣೆ ಗೆಲ್ಲಲು ಸಿಎಂ-ಡಿಸಿಎಂ ಒಗ್ಗಟ್ಟಿನ ಜಪ

ವೀರಣ್ಣ ಚರಂತಿ ಮಠ ತಮ್ಮ ಅಪಾರ ಬೆಂಬಲಿಗರೊಂದಿಗೆ ಆಗಮಿಸಿ ನಾಮಪತ್ರ ಸಲ್ಲಿಸಿದರು.ಹಾಗೆಯೇ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ದಿ. ಹೆಚ್.ವೈ. ಮೇಟಿಯವರ ಕಿರಿಯ ಪುತ್ರ ಉಮೇಶ್ ಮೇಟಿ ಸಹ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಬಿಜೆಪಿ ಅಭ್ಯರ್ಥಿಯ ಉಮೇದುವಾರಿಕೆ ಸಲ್ಲಿಕೆ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಸೇರಿದಂತೆ ಹಲವು ನಾಯಕರುಗಳು ಉಪಸ್ಥಿತರಿದ್ದರು. ಹಾಗೆಯೇ ಕಾಂಗ್ರೆಸ್ ಅಭ್ಯರ್ಥಿಯ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಾಲ್ಗೊಂಡಿದ್ದರು.

ಈ ಉಪಚುನಾವಣೆಗೆ ಇಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಮಾ. 26 ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದು, ನಾಳೆ ನಾಮಪತ್ರ ಪರಿಶೀಲನೆ ನಡೆಯಲಿದೆ.

ಏ. 9 ರಂದು ಈ ಎರಡು ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದ್ದು, ಮೇ 4 ರಂದು ಮತ ಏಣಿಕೆ ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟವಾಗಲಿದೆ.

# ರಾಯಚೂರಿನ ಜಿಲ್ಲಾಡಳಿತದಿಂದ ದೇವರ ದಾಸಿಮಯ್ಯ ಜಯಂತ್ಯುತ್ಸವ

ಚಾಲನೆ: ಬೆಳಗ್ಗೆ ನಡೆದ ದೇವರ ದಾಸಿಮಯ್ಯ ಭಾವಚಿತ್ರದ ಮೆರವಣಿಗೆಗೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಮುಖಂಡರಾದ ರವಿ ಭೋಸರಾಜು, ನರಸಿಂಹಲು ಮಾಡಗಿರಿ, ಕೆ.ಶಾಂತಪ್ಪ ಅವರು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಚಾಲನೆ ನೀಡಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಆರಂಭವಾದ ಮೆರವಣಿಗೆಯು ನಗರದ ಸಾರ್ವಜನಿಕ ಉದ್ಯಾನವನದ ಮಾರ್ಗವಾಗಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಸಾಗಿತು. ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಿದ್ದವು. ಇದೇ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಜಿ.ನಾಗರಾಜ ಮಾನವಿ, ದೊಡ್ಡ ಈರಣ್ಣ, ಉದಯ ಕುಮಾರ್, ಹೆಚ್. ವೆಂಕಟೇಶ, ಮೈಕಲ್ ಬಾಬು, ದತ್ತಾತ್ರೇಯ, ವಿಠ್ಠಲ್, ಪುಷ್ಪವಂತಿ, ನಾಗರಾಜ್, ಶ್ರೀನಿವಾಸ ಕೆ.ಎನ್., ಶಿವಾನಂದ, ಬಸವರಾಜ ಸೇರಿದಂತೆ ಇತರು ಇದ್ದರು.

## ಕೌಶಲ್ಯ ಭಾರತ ಎನ್ನುವ ಶೀರ್ಷಿಕೆ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ: ಡಾ. ಜೆ.ಎಲ್.ಈರಣ್ಣ

ಸಂಯೋಜಕರಾದ ಪ್ರವೀಣ್ ಕುಮಾರ್ ಮತ್ತು ತರಬೇತಿದಾರರಾದ ಕುಮಾರಿ ದಿವ್ಯಶ್ರೀ ಕುಮಾರಿ ಪೂಜಾ ರವರು ವಿದ್ಯಾರ್ಥಿಗಳಿಗೆ ಅಗತ್ಯ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಗಣಕಯಂತ್ರ ವಿಭಾಗದ ಮುಖ್ಯಸ್ಥರಾದ ಡಾ. ಸೈಯದ್ ಮೀನಾಜ ವುಲ್ ಹಸನ್ ಹಾಗೂ ಐಕ್ಯೂ ಎ.ಸಿ. ಸಂಚಾಲಕರಾದ ಶಶಿಧರ್.ಎಸ್ ,ಕಾಲೇಜಿನ ಉದ್ಯೋಗ ಭರವಸೆ ಕೋಶದ ಸಂಯೋಜಕರಾದ ಚಂದ್ರು , ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ .ಚನ್ನಬಸವ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ದೇವರಿಗೇ ಸವಾಲು ಹಾಕಿದ ವಚನಕಾರ ದೇವರ ದಾಸಿಮಯ್ಯ: ಕೆ.ಈ.ನರಸಿಂಹ.




ಧೈರ್ಯದ ದಾರಿ

**ಮಾನ್ವಿ:-** ಹನ್ನೆರಡನೆಯ ಶತಮಾನದ ವಚನಕಾರರಲ್ಲಿ ಅಗ್ರಗಣ್ಯ ವಚನಕಾರ ದೇವರ ದಾಸಿಮಯ್ಯ ದೇವರಿಗೇ ಸವಾಲು ಹಾಕಿದ ಗಟ್ಟಿಗ ದೇವರ ದಾಸಿಮಯ್ಯ. ಎಂದು ಮಾನ್ವಿ ತಾಲೂಕ ನೇಕಾರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಕೆ.ಈ.ನರಸಿಂಹ ಹೇಳಿದರು. ಅವರು ಇಂದು ತಸಲೂಕ ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಆದ್ಯ ವಚನಕಾರ ಜೇಡರ ದಾಸಿಮಯ್ಯ ಜಯಂತಿ ಕಾರ್ಯಕ್ರಮ ದಲ್ಲಿ ಮಾತನಾಡಿದರು. ವಚನ ಸಾಹಿತ್ಯ ಜಾಗತಿಕ ಮಹತ್ವ ಪಡೆದಿದೆ. ಅದರಲ್ಲೂ ದೇವರ ದಾಸಿಮಯ್ಯ ನವರ ವಚನಗಳು ಸಮಾಜದ ಸರ್ವರ ಬದುಕಿನ ಸಮಸ್ಯೆಗಳನ್ನು ನಿವಾರಿಸಲು ಸಹಕಾರಿ ಆಗಿವೆ ಎಂದರು.ಒಡಲುಗೊಂಡವ ಹಸಿವ ಒಡಲುಗೊಂಡವ ಹುಸಿವ ಎಂದು ಅಡಿಗಡಿಗೆ ನುಡಿಯದಿರು ನೀನೊಮ್ಮೆ ಒಡಲುಗೊಂಡು ನೋಡಾ ರಾಮನಾಥ ಎಂದು ಭಗವಂತನಿಗೆ ಸವಾಲು ಹಾಕಿದವರು ದಾಸಿಮಯ್ಯ ಎಂದು ಹೇಳಿ ಮಾತಿನ ಉದ್ದಕ್ಕೂ ದಾಸಿಮಯ್ಯ ರ ವಚನಗಳನ್ನು ಉದಾಹರಣೆ ನೀಡಿದರು. ಈ ಸಂದರ್ಭದಲ್ಲಿ ನೇಕಾರ ಸಮುದಾಯದ ಗುಮ್ಮಾ ಬಸವರಾಜ ವಕೀಲರು, ಮಸ್ಕಿ ಗಂಗಾಧರ, ಜಿ.ಶಿವುಕುಮಾರ, ಜಿ.ಪ್ರೇಮ ಕುಮಾರ, ಸತೀಶಕುಮಾರ, ಪ್ರದೀಪ್, ಮಾರ್ಕಂಡಯ್ಯ, ಸಿದ್ರಾಮ ಬುದ್ದಿ, ಸುಶಿಲಮ್ಮ, ಸೇರಿದಂತೆ ಅನೇಕರು ಇದ್ದರು. ತಹಶಿಲ್ದಾರ ಭೀಮ ರಾವ್ ರಾಮ ಸಮುದ್ರ ಅಧ್ಯಕ್ಷತೆ ವಹಿಸಿದ್ದರು.

# ಭಾರತ ಸರ್ಕಾರದ ವಾರ್ತಾ ಶಾಖೆಯಿಂದ ಮಾರ್ಚ್ 25ರಂದು ಪತ್ರಕರ್ತರಿಗೆ ಕಾರ್ಯಾಗಾರ

ಧೈರ್ಯದ ದಾರಿ

**ರಾಯಚೂರು ಮಾ,23-**ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇದೇ 25 ಬುಧವಾರದಂದು ರಾಯಚೂರಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರ ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 10:30ಕ್ಕೆ ಕಾರ್ಯಕ್ರಮದ ಉದ್ಘಾಟನಾ ನೆರವೇರಲಿದ್ದು, ಜನಪ್ರತಿನಿಧಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆ.

ಕಾರ್ಯಾಗಾರದ ಮೊದಲ ಅಧಿವೇಶನದಲ್ಲಿ ವಿಕಸಿತ ಭಾರತ: ಜಿ ರಾಮ್ ಜಿ ಯೋಜನೆ ಕುರಿತು ರಾಯಚೂರು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣ ಬಸವರಾಜ ಅವರು ಉಪನ್ಯಾಸ ನೀಡುವರು. ಅಪರಾಧ ವರದಿಗಾರಿಕೆಯ ಜವಾಬ್ದಾರಿಗಳ ಕುರಿತು ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಜೆ. ಕುಮಾರಸ್ವಾಮಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನ ಕುರಿತು ಇಲಾಖೆಯ ಜಿಲ್ಲಾ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು, ಕೃಷಿ, ತೋಟಗಾರಿಕಾ ವಲಯದ ಯೋಜನೆಗಳ ಅನುಷ್ಠಾನದ ಕುರಿತು ರಾಯಚೂರು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರಾದ ಡಾ. ತಿಪ್ಪಣ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳ ಅನುಷ್ಠಾನದ ಕುರಿತು ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್ ಯು., ಹಣಕಾಸು ಸುರಕ್ಷತೆ ಮತ್ತು ಆರ್ಥಿಕ ಸಬಲೀಕರಣದ ಕುರಿತು ರಾಯಚೂರು ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಸುಧೀಂದ್ರ ಪಿ.ಆರ್. ಅವರು ಮಾಹಿತಿ ಹಂಚಿಕೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ರಾಯಚೂರು ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು, ಸದಸ್ಯರ ಪ್ರವಾಸ

ಧೈರ್ಯದ ದಾರಿ



**ರಾಯಚೂರು ಮಾ,23-**ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಗೌರವಾನ್ವಿತ ಅಧ್ಯಕ್ಷರಾದ ಡಾ.ಟಿ.ಶ್ಯಾಮ್ ಭಟ್ ಹಾಗೂ ಸದಸ್ಯರಾದ ಎಸ್.ಕೆ ವಂಟಿಗೋಡಿ ಅವರು ಮಾರ್ಚ್ 25 ಹಾಗೂ 26ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅವರು ಮಾರ್ಚ್ 25ರಂದು ಬೆಳಗ್ಗೆ 8.40ಕ್ಕೆ ಬೆಂಗಳೂರಿನಿಂದ ವಿಮಾನದ ಮೂಲಕ ಹೊರಟು ಬೆಳಗ್ಗೆ 10.10ಕ್ಕೆ ಹೈದ್ರಾಬಾದ್ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಬಳಿಕ 10.30ಕ್ಕೆ ಹೈದ್ರಾಬಾದ್ ವಿಮಾನ ನಿಲ್ದಾಣದಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಮಧ್ಯಾಹ್ನ 2.30ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ವಿಶ್ರಾಂತಿ ಮಾಡುವರು. ಮಧ್ಯಾಹ್ನ 3 ಗಂಟೆಯಿಂದ ಸಂಜೆ 6.30ರವರೆಗೆ ವಿವಿಧೆಡೆ ಭೇಟಿ ನೀಡುವರು. ಬಳಿಕ ರಾಯಚೂರಿನ ಗೆಸ್ಟ್ ಹೌಸ್‌ನಲ್ಲಿ ವಾಸ್ತವ್ಯ ಹೂಡುವರು.

ಮಾರ್ಚ್ 26ರ ಬೆಳಿಗ್ಗೆ 9.30 ರಿಂದ 11 ಗಂಟೆವರೆಗೆ ವಿವಿಧೆಡೆ ಭೇಟಿ ನೀಡುವರು. ಬಳಿಕ ಬೆಳಗ್ಗೆ 11 ರಿಂದ ಮಧ್ಯಾಹ್ನ 12 ಗಂಟೆವರೆಗೆ ಆಯೋಗದ ಸಭೆ ನಡೆಸುವರು. ಮಧ್ಯಾಹ್ನ 12 ಗಂಟೆಯಿಂದ 1 ಗಂಟೆವರೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಂವಾದ ನಡೆಸುವರು. 1 ಗಂಟೆಯಿಂದ 1.30ರವರೆಗೆ ಪತ್ರಿಕಾಗೋಷ್ಠಿ ನಡೆಸುವರು. ಮಧ್ಯಾಹ್ನ 1.30 ರಿಂದ ಊಟದ ವಿರಾಮದ ಬಳಿಕ ಮಧ್ಯಾಹ್ನ 3 ಗಂಟೆಗೆ ರಾಯಚೂರ ನಗರದಿಂದ ನಿರ್ಗಮಿಸಿ ಹೈದ್ರಾಬಾದ್‌ಗೆ ತೆರಳಿ ಅಲ್ಲಿಂದ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳಸಲಿದ್ದಾರೆ ಎಂದು ಆಯೋಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಗೌತಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಔರಾದ ಕ್ಷೇತ್ರದ ಎಲ್ಲ ಗ್ರಾಮ-ತಾಂಡಾಗಳಲ್ಲಿ ಸಮುದಾಯ ಭವನಗಳ ನಿರ್ಮಾಣ: ಶಾಸಕ ಪ್ರಭು ಚವ್ಹಾಣ






**ಕಮಲನಗರ:ಮಾ.23:**ಔರಾದ(ಬಿ) ವಿಧಾನಸಭಾ ಕ್ಷೇತ್ರದ ಎಲ್ಲ ಗ್ರಾಮದ ಪರಿಶಿಷ್ಟ ಜಾತಿಯ ಓಣಿಗಳು ಮತ್ತು ತಾಂಡಾಗಳಲ್ಲಿ ಸಮುದಾಯ ಭವನಗಳನ್ನು ನಿರ್ಮಿಸಲಾಗುವುದೆಂದು ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.ಔರಾದ(ಬಿ) ತಾಲ್ಲೂಕಿನ ಘಮಸುಬಾಯಿ ತಾಂಡಾ ಬೋಂತಿಯಲ್ಲಿ ಮಾ.21ರಂದು ನಡೆದ ಸಮಾಜದ ಚಿಂತನ-ಮಂಥನ ಹಾಗೂ ಜಾಗೃತಿ ಕಾರ್ಯಕ್ರಮದಲ್ಲಿ ಶಾಸಕರು ಮಾತನಾಡಿದರು. ಪರಿಶಿಷ್ಟ ಸಮುದಾಯ ವಾಸಿಸುವ ಎಲ್ಲ ಗ್ರಾಮಗಳಲ್ಲಿ ಸಮುದಾಯ ಭವನಗಳನ್ನು ನಿರ್ಮಿಸಬೇಕೆಂಬುದು ನನ್ನ ಬಹುದಿನಗಳ ಕನಸಾಗಿತ್ತು. ಗ್ರಾಮ ಸಂಚಾರದ ಸಂದರ್ಭದಲ್ಲಿಯೂ ಪ್ರತಿ ಊರಿನಿಂದ ಈ ಕುರಿತ ಬೇಡಿಕೆಗಳು ಬಂದಿವೆ. ಹಾಗಾಗಿ ಶಾಸಕನಾಗಿ ಆಯ್ಕೆಯಾದಾಗಿನಿಂದ ನಿರಂತರವಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಾ ಬರುತ್ತಿದ್ದೇನೆ. ಅದಕ್ಕೆ ಸ್ಪಂದನೆ ಸಿಕ್ಕಿದ್ದು, ಎಲ್ಲ ಗ್ರಾಮಗಳ ಎಸ್ಸಿ ಓಣಿಯಲ್ಲಿ ಸುಂದರ ಸಮುದಾಯ ಭವನಗಳು ನಿರ್ಮಿಸುವ ಸಂಕಲ್ಪ ಸಾಕಾರವಾಗುವ ದಿನಗಳು ಹತ್ತಿರ ಬಂದಿವೆ ಎಂದರು.

ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾತನಾಡಿ, ಶೀಘ್ರ ನಿವೇಶನ ಗುರುತಿಸಿಕೊಡುವಂತೆ ಸೂಚಿಸಿದ್ದೇನೆ. ಇದಕ್ಕೆ ಸಮಾಜ ಬಾಂಧವರು ಸಹಕರಿಸಬೇಕು. ಅಂಬೇಡ್ಕರರ ವಿಚಾರಧಾರೆಗಳು ಮತ್ತಷ್ಟು ಪ್ರಚಾರವಾಗಬೇಕು. ಸಾಮಾಜಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು, ಮದುವೆ ಹಾಗೂ ಮತ್ತಿತರೆ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲ ಆಗಬೇಕೆಂಬ ಉದ್ದೇಶದೊಂದಿಗೆ ಕಟ್ಟಡಗಳ ವಿನ್ಯಾಸ ರೂಪಿಸುವಂತೆ ತಿಳಿಸಲಾಗಿದೆ. ಎಲ್ಲ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ಕಾಮಗಾರಿಗಳಿಗೆ ಪೂಜೆ ನೆರವೇರಿಸಲಾಗುತ್ತದೆ. ಕಾಮಗಾರಿಯ ಮೇಲೆ ನಿಗಾ ವಹಿಸಬೇಕು. ತಾವುಗಳು ಮುಂದೆ ನಿಂತು ಕೆಲಸ ಸರಿಯಾಗಿ ಮಾಡಿಕೊಳ್ಳಬೇಕು ಎಂದು ಸಮಾಜ ಬಾಂಧವರಿಗೆ ತಿಳಿಸಿದರು.ನಾನು ಕೂಡ ದಲಿತನಾಗಿದ್ದು, ದಲಿತ ಸಮಾಜಗಳ ಅಭಿವೃದ್ಧಿಗೆ ನಿರಂತರ ಶ್ರಮಿಸುತ್ತಿದ್ದೇನೆ. ಹಿಂದೆ ಎಸ್ಸಿ ಓಣಿಗಳಲ್ಲಿ ಯಾವುದೇ ಸೌಕರ್ಯಗಳಿರಲಿಲ್ಲ. ನಾನು ಶಾಸಕನಾದ ನಂತರ ಸುವರ್ಣ ಗ್ರಾಮ, ಗ್ರಾಮ ವಿಕಾಸ ಯೋಜನೆ, ಎಎಸ್ಸಿಪಿ, ಟಿಎಸ್‌ಪಿ ಹಾಗೂ ಮತ್ತಿತರೆ ಯೋಜನೆಗಳಡಿ ರಸ್ತೆ, ಚರಂಡಿ, ಹೈಮಾಸ್ಟ್ ವಿದ್ಯುತ್ ದೀಪಗಳು ಒಳಗೊಂಡು ಎಲ್ಲ ಸೌಕರ್ಯಗಳನ್ನು ಕಲ್ಪಿಸುತ್ತಿದ್ದೇನೆ. ಎಲ್ಲ ಗ್ರಾಮಗಳಲ್ಲಿ ಅಂಗನವಾಡಿ ಕೇಂದ್ರಗಳಾಗಿವೆ. ಅವಶ್ಯಕತೆಯಿರುವ ಕಡೆ ಇನ್ನು ಹೊಸ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಕ್ರಮ ವಹಿಸಲಾಗುವುದೆಂದು ಹೇಳಿದರು.

ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಕೃಪೆಯಿಂದಾಗಿ ನಾನು ಶಾಸಕನಾಗಲು ಸಾಧ್ಯವಾಗಿದೆ. ಅವರ ಅನುಯಾಯಿಯಾಗಿದ್ದು, ಅವರ ತತ್ವಾದರ್ಶಗಳನ್ನು ಪಾಲಿಸುತ್ತಾ ಬಂದಿದ್ದೇನೆ. ಅವರು ಶಿಕ್ಷಣ, ಸಂಘಟನೆ, ಹೋರಾಟದ ಸಂದೇಶ ನೀಡಿದ್ದರು. ಅವರ ಆಶಯದಂತೆ ಕ್ಷೇತ್ರದಲ್ಲಿ ಶಿಕ್ಷಣದ ಅಭಿವೃದ್ಧಿಗೆ ಹೆಚ್ಚಿನ ಒತ್ತು ಕೊಟ್ಟಿದ್ದು, ಎಲ್ಲ ಕಡೆಗಳಲ್ಲಿ ಶಾಲಾ ಕಾಲೇಜುಗಳನ್ನು ತೆರೆದು ಎಲ್ಲರಿಗೂ ಶಿಕ್ಷಣ ಕಲ್ಪಿಸಲು ಪ್ರಯತ್ನಿಸುತ್ತಿದ್ದೇನೆ. ಬಡವರಿಗೆ ಉಚಿತ ಮತ್ತು ಗುಣಮಟ್ಟದ ಶಿಕ್ಷಣ ಕಲ್ಪಿಸಲು ಬಲ್ಲೂರ(ಜೆ), ಹೊರಂಡಿ, ಚಿಂತಾಕಿ, ಚಿಮ್ಮೇಗಾಂವ, ವನಮಾರಪಳ್ಳಿ ಸೇರಿದಂತೆ ಪ್ರತಿ ಹೋಬಳಿ ಕೇಂದ್ರದಲ್ಲಿ ವಸತಿಯುತ ಶಾಲೆಗಳನ್ನು ತಂದಿದ್ದೇನೆ ಎಂದರು.ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಪ್ರತಿ ಗ್ರಾಮದ ಎಸ್ಸಿ ಓಣಿಗಳಿಂದ ಐಎಎಸ್, ಐಪಿಎಸ್, ಕೆಎಎಸ್, ವೈದ್ಯರು, ಇಂಜಿನೀಯರ್‌ಗಳು ಹೊರಬರಬೇಕು ಎಂಬುದು ನನ್ನ ಕನಸಾಗಿದೆ. ಈ ದಿಶೆಯಲ್ಲಿ ಸರ್ಕಾರದಿಂದ ಅಗತ್ಯ ನೆರವು ಒದಗಿಸಲು ನಾನು ಸಿದ್ದನಿದ್ದೇನೆ. ತಾವೆಲ್ಲರೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ವಿದ್ಯಾರ್ಥಿಗಳು ಕೂಡ ಸರಿಯಾಗಿ ಓದಬೇಕು. ಉನ್ನತ ಕನಸ್ಸುಗಳನ್ನು ಇಟ್ಟುಕೊಂಡು ಅಭ್ಯಾಸ ಮುಂದುವರೆಸಬೇಕು ಎಂದು ಹೇಳಿದರು.ನಿಮ್ಮೆಲ್ಲರ ಆಶೀರ್ವಾದದಿಂದಾಗಿ ನಾಲ್ಕು ಬಾರಿ ಶಾಸಕನಾಗಿ ಸೇವೆ ಸಲ್ಲಿಸುತ್ತಿದ್ದೇನೆ. ಅಭಿವೃದ್ಧಿ ಕೆಲಸಗಳನ್ನು ನಿರಂತರವಾಗಿ ಮುಂದುವರೆಸುತ್ತಿದ್ದೇನೆ. ಪರಿಶಿಷ್ಟ ಜಾತಿಗಳ ಅಭಿವೃದ್ಧಿಗೆ ಸದಾ ಶ್ರಮಿಸುತ್ತಿದ್ದೇನೆ. ಆದರೆ ಕೆಲವರು ನಿರಂತರವಾಗಿ ನನ್ನ ಬಗ್ಗೆ ಅಪ ಪ್ರಚಾರ ಮಾಡುತ್ತಿದ್ದಾರೆ. ಅಭಿವೃದ್ಧಿ ಕೆಲಸಗಳಿಗೆ ಅಡ್ಡಿಪಡಿಸಿ ಜನತೆಗೆ ತೊಂದರೆ ಕೊಡಲು ಯತ್ನಿಸುತ್ತಿದ್ದಾರೆ. ಆರ್‌ಟಿಐ ದುರ್ಬಳಕೆ, ಲೋಕಾಯುಕ್ತಕ್ಕೆ ದೂರು ಸಲ್ಲಿಸಿ ಅಧಿಕಾರಿಗಳನ್ನು ಹೆದರಿಸುವುದು, ಬೆದರಿಸುವುದನ್ನು ಮಾಡುತ್ತಿದ್ದಾರೆ. ಇಂಥವರಿಂದ ಎಚ್ಚರಿಕೆ ವಹಿಸಬೇಕು. ಯಾವುದೇ ರೀತಿಯ ಅಪ ಪ್ರಚಾರಗಳಿಗೆ ಕಿವಿಗೊಡಬಾರದು ಎಂದು ಹೇಳಿದರು.ಔರಾದ ಅಂಬೇಡ್ಕರ್ ಭವನಕ್ಕೆ ಮೆಚ್ಚುಗೆ: ಮುಖಂಡರಾದ ಅರಹಂತ ಸಾವಳೆ ಹಾಗೂ ಸೂರ್ಯಕಾಂತ ಸಿಂಗೆ ಮಾತನಾಡಿ, ಶಾಸಕರಿಂದಾಗಿ ಔರಾದ(ಬಿ) ಪಟ್ಟಣದಲ್ಲಿ 3 ಕೋಟಿ ವೆಚ್ಚದಲ್ಲಿ ಸುಂದರ ಡಾ.ಬಿ.ಆರ್ ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಗೊಳ್ಳುತ್ತಿದೆ. ಈ ಮೂಲಕ ಶಾಸಕರ ಮತ್ತು ಸಮಾಜದ ಬಹಳಷ್ಟು ದಿನಗಳ ಕನಸು ನನಸಾಗುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಶಾಸಕರು ಪರಿಶಿಷ್ಟ ಜಾತಿಯವರ ಶ್ರೇಯಸ್ಸಿಗಾಗಿ ನಿರಂತರ ಶ್ರಮಿಸುತ್ತಿದ್ದಾರೆ. ಎಲ್ಲರ ಕಷ್ಟ ಸುಖಗಳಲ್ಲಿ ಭಾಗಿಯಾಗುತ್ತಾರೆ. ಸಂಕಷ್ಟದಲ್ಲಿದ್ದವರಿಗೆ ನೆರವಾಗುತ್ತಾರೆ. ಸಮಾಜದ ಅಭಿವೃದ್ಧಿಗಾಗಿ ಅವರ ಕೈ ಬಲಪಡಿಸಬೇಕು ಎಂದು ಹೇಳಿದರು. ಮುಖಂಡರಾದ ರಾಮಶೆಟ್ಟಿ ಪನ್ನಾಳೆ ಮಾತನಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಾಲಾಜಿ ಕಾಳೆಕರ್, ನಾರಾಯಣ ವಾಗಮಾರೆ, ಪ್ರಕಾಶ ಭಂಗಾರೆ, ಸಂಜುಕುಮಾರ ಡೊಂಗ್ರೆ, ಸಂತೋಷ ಜೊನ್ನಿಕೇರಿ, ಸಿದ್ದಾರ್ಥ ರಾಜುರೆ, ಸಂತೋಷ ಕಾಂಬಳೆ, ಶಿವರಾಜ ಝುಲಾಂಡೆ, ಸೋಪಾನರಾವ ಡೊಂಗ್ರೆ, ರಮೇಶ ಶಳ್ಕೆ, ತುಳಸಿರಾಮ ಬೇಂದ್ರೆ, ಸುಧಾಮ ಭಾಸ್ಕರ್, ದಿಲೀಪ ಸೋಮವಂಶಿ, ಕಿರಣ ಮಾತಾರ್‌ಂಡ್, ಹರಿ ಮದನೂರ ಸೇರಿದಂತೆ ವಿವಿಧ ಗ್ರಾಮಗಳಿಂದ ಆಗಮಿಸಿದ ದಲಿತ ಮುಖಂಡರು, ಪ್ರಮುಖರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಡಾ.ರೋಹಿದಾಸ ಮೇತ್ರೆ ನಿರೂಪಿಸಿ ವಂದಿಸಿದರು.

## ಮಾರ್ಚ್ 25, 26ರಂದು ಮಾನವ ಹಕ್ಕುಗಳ ಆಯೋಗದಿಂದ ರಾಯಚೂರಲ್ಲಿ ಸಿಟ್ಟಿಂಗ್ಸ್: ದೂರುಗಳು, ಅಹವಾಲು ಸಲ್ಲಿಸಲು ಸಾರ್ವಜನಿಕರಿಗೆ ಅವಕಾಶ

ಧೈರ್ಯದ ದಾರಿ

**ರಾಯಚೂರು ಮಾ,23-** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ 1993ರ ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮದ ಅಡಿಯಲ್ಲಿ ಸ್ಥಾಪಿತವಾಗಿರುವ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಮಾರ್ಚ್ 25 ಹಾಗೂ ಮಾರ್ಚ 26ರಂದು ರಾಯಚೂರು ಜಿಲ್ಲೆಯಲ್ಲಿ ಸಿಟ್ಟಿಂಗ್ಸ್ ನಡೆಸಲು ಉದ್ದೇಶಿಸಿದೆ. ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಇತ್ಯರ್ಥಪಡಿಸಿ ವಿಲೇಮಾಡಿ ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ.

ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಕೋರಲಾಗಿದೆ. ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಯಚೂರು ಜಿಲ್ಲೆಯಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನಿಗದಿತ ದಿನಾಂಕದಂದು ಸಾರ್ವಜನಿಕರಿಂದ ದೂರುಗಳು ಅಥವಾ ಅಹವಾಲುಗಳನ್ನು ಸಹ ಸ್ವೀಕರಿಸಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರು ನಿಗದಿತ ದಿನಾಂಕದಂದು ಆಯೋಗದ ಮಾನ್ಯ ಅಧ್ಯಕ್ಷರು (ಹಂಗಾಮಿ) ಹಾಗೂ ಮಾನ್ಯ ಸದಸ್ಯರನ್ನು ಸಂಪರ್ಕಿಸಿ ದೂರುಗಳನ್ನು ಸಲ್ಲಿಸಬಹುದು.

ದಿನಾಂಕ 25-03-2026 ಮತ್ತು 26-03-2026ರಂದು ರಾಯಚೂರು ಜಿಲ್ಲೆಯಲ್ಲಿ ಸಿಟ್ಟಿಂಗ್ಸ್ ನಡೆಸುವುದಾಗಿ ಆಯೋಗವು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ ಎಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಕಾರ್ಯದರ್ಶಿ ಎ ದಿನೇಶ್ ಸಂಪತ್‌ರಾಜ್ ಅವರು ತಿಳಿಸಿದ್ದಾರೆ.

# ಕಟ್ಟಡ ಕಾರ್ಮಿಕರ ನಿಧಿ ದುರ್ಬಳಕೆ ತಡೆಗೆ ಮನವಿ



**ಕಲಬುರಗಿ:ಮಾ.23:** 2026-27 ಸಾಲಿನ ರಾಜ್ಯಸರ್ಕಾರದ ಬಜೆನಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ 27 ಸಾಲಿನ ರಾಜ್ಯ ಸರ್ಕಾರದ ಬಜೆನಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಕಟ್ಟಡಕಾರ್ಮಿಕರ ನಿಧಿಯ ಬಳಕೆಗೆ ತೀವ್ರ ವಿರೋಧ ವ್ಯಕ್ತಪಡಿಸಿ, ತಾವುಗಳು ವಿಧಾನಸಭೆ/ ವಿಧಾನ ಪರಿಷತ್ತನಲ್ಲಿ ಪ್ರಶ್ನಿಸಿ ಸರ್ಕಾರದ ಗಮನ ಸೆಳೆದು ಕಟ್ಟಡಕಾರ್ಮಿಕರ ಪರವಾಗಿಧ್ವನಿ ಎತ್ತಬೇಕೆಂದು ಸಚಿವ ಡಾ.ಶರಣಪ್ರಕಾಶ ಪಾಟೀಲ, ಶಾಸಕರಾದ ಎಂ.ವಾಯ್.ಪಾಟೀಲ, ಅಲ್ಲಮಪ್ರಭು ಪಾಟೀಲ, ಬಸವರಾಜ ಮತ್ತಿಮಡು ಇವರಿಗೆ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಫೆಡರೇಶನ್ (ರಿ), ಸಿ.ಐ.ಟಿ.ಯು ಸಂಯೋಜಿತ ಸಂಘಟನೆ ವತಿಯಿಂದ ಮನವಿ ಸಲ್ಲಿಸಿಲಾಯಿತು. ಈ ಸಂದರ್ಭದಲ್ಲಿ ಕಲಬುರ್ಗಿ ಜಿಲ್ಲಾ ಸಮಿತಿ ಸಂಚಾಲಕ ಶ್ರೀಮಂತ ಬಿರಾದರ್, ಸಹ ಸಂಚಾಲಕ ನಾಗಪ್ಪ ರಾಯಚೂರಕರ, ಖಜಂಚಿ ಬಾಬು ಹೂವಿನಹಳ್ಳಿ, ಯಶ್ವಂತ್ ಪಾಟೀಲ್, ಪ್ರಕಾಶ್ ಕುಸಾಳೆ, ಮಹಮ್ಮದ್ ಇಸ್ಮಾಯಿಲ್, ಅಶೋಕ್ ಬಾಗಡೆ, ಅಂಬರಾಯ, ಹನುಮಂತ, ಶಾಮರಾವ್, ಭೀಮರಾವ್, ಮಹಾಂತಪ, ಲಕ್ಷ್ಮಣ ನಂದೂರಕರ್ ಸೇರಿದಂತೆ ತಾಲೂಕ್ ಪದಾಧಿಕಾರಿಗಳು ಇದ್ದರು.

## ಇಸ್ರೇಲ್- ಅಮೇರಿಕಾಗೆ ಠಕ್ಕರ್ ಕೊಟ್ಟ ಇರಾನ್



**ಆರಾದ್, ಮಾ. 23-** ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧವು ಈಗ ನಾಲ್ಕನೇ ವಾರದಲ್ಲಿದ್ದು, ಈ ಪ್ರದೇಶದಾದ್ಯಂತ ಜೀವಗಳು ಮತ್ತು ಜೀವನೋಪಾಯವನ್ನು ಅಪಾಯಕ್ಕೆ ಸಿಲುಕಿಸಿರುವುದರಿಂದ ಯುನೈಟೆಡ್ ಸ್ಟೇಟ್ಸ್ ಮತ್ತು ಇರಾನ್ ನಿರ್ಣಾಯಕ ಮೂಲಸೌಕರ್ಯಗಳನ್ನು ಗುರಿಯಾಗಿಸುವುದಾಗಿ ಬೆದರಿಕೆ ಹಾಕಿವೆ.ತೈಲ ಮತ್ತು ಇತರ ರಫ್ತಿಗೆ ನಿರ್ಣಾಯಕವಾದ ಹಾರ್ಮುಜ್ ಜಲಸಂಧಿಯನ್ನು ಅಮೆರಿಕವು ತನ್ನ ವಿದ್ಯುತ್ ಸ್ಥಾವರಗಳ ಮೇಲೆ ದಾಳಿ ಮಾಡುವ ಬೆದರಿಕೆಯನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅನುಸರಿಸಿದರೆ ತಕ್ಷಣವೇ ಸಂಪೂರ್ಣವಾಗಿ ಮುಚ್ಚಲಾಗುವುದು ಎಂದು ಇರಾನ್ ಹೇಳಿದೆ.ಟ್ರಂಪ್ ಜಲಸಂಧಿಯನ್ನು ತೆರೆಯಲು 48 ಗಂಟೆಗಳ ಗಡುವು ವಿಧಿಸಿದರು.ಇರಾನಿನ ಕ್ಷಿಪಣಿಗಳು ಹೊಡೆದುರುಳಿಸಿದ ರಹಸ್ಯ ಪರಮಾಣು ಸಂಶೋಧನಾ ಸ್ಥಳದ ಬಳಿ ಇರುವ ಎರಡು ದಕ್ಷಿಣ ಸಮುದಾಯಗಳಲ್ಲಿ ಒಂದನ್ನು ಇಸ್ರೇಲಿ ನಾಯಕರು ತಡರಾತ್ರಿ ಭೇಟಿ ಮಾಡಿದರು, ಹಲವಾರು ಜನರು ಗಾಯಗೊಂಡರು.

ಯಾರೂ ಕೊಲ್ಲಲ್ಪಟ್ಟಿಲ್ಲದಿರುವುದು ಪವಾಡ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದರು.ಇಸ್ರೆಲ್ ಮತ್ತು ಯುಎಸ್ ತಮ್ಮ ಯುದ್ಧ ಗುರಿಗಳನ್ನು ಸಾಧಿಸುವ ಹಾದಿಯಲ್ಲಿವೆ ಎಂದು ನೆತನ್ಯಾಹು ಹೇಳಿದ್ದಾರೆ.ಇರಾನ್‌ನ ಪರಮಾಣು ಕಾರ್ಯಕ್ರಮ, ಕ್ಷಿಪಣಿ ಕಾರ್ಯಕ್ರಮವನ್ನು ದುರ್ಬಲಗೊಳಿಸುವುದರಿಂದ ಮತ್ತು ಸಶಸ್ತ್ರ ಪ್ರಾಕ್ಸಿಗಳಿಗೆ ಬೆಂಬಲ ನೀಡುವುದರಿಂದ ಹಿಡಿದು ಇರಾನಿನ ಜನರು ದೇವಪ್ರಭುತ್ವವನ್ನು ಉರುಳಿಸಲು ಅನುವು ಮಾಡಿಕೊಡುವವರೆಗೆ ಗುರಿಗಳಿವೆ.ಜಾಗತಿಕ ಆರ್ಥಿಕತೆಯನ್ನು ಅಲುಗಾಡಿಸಿರುವ,ತೈಲ ಬೆಲೆಗಳನ್ನು ಹೆಚ್ಚಿಸಿರುವ ಮತ್ತು ವಿಶ್ವದ ಕೆಲವು ಜನನಿಬಿಡ ವಾಯು ಕಾರಿಡಾರ್‌ಗಳನ್ನು ಅಪಾಯಕ್ಕೆ ಸಿಲುಕಿಸಿರುವ ದಂಗೆಯ ಯಾವುದೇ ಲಕ್ಷಣಗಳಿಲ್ಲ, ಅಥವಾ ಹೋರಾಟದ ಅಂತ್ಯವೂ ಇಲ್ಲ.

ಫೆಬ್ರವರಿ 28 ರಂದು ಯುಎಸ್ ಮತ್ತು ಇಸ್ರೆಲ್ ಪ್ರಾರಂಭಿಸಿದ ಈ ಯುದ್ಧವು 2,000 ಕ್ಕೂ ಹೆಚ್ಚು ಜನರನ್ನು ಬಲಿ ತೆಗೆದುಕೊಂಡಿದೆ.ಇರಾನ್ ಬೆಂಬಲಿತ ಹೆಜ್ಬೊಲ್ಲಾ ಉತ್ತರ ಇಸ್ರೆಲ್‌ನಲ್ಲಿ ಒಬ್ಬ ವ್ಯಕ್ತಿಯನ್ನು ಕೊಂದ ವೈಮಾನಿಕ ದಾಳಿಯ ಜವಾಬ್ದಾರಿಯನ್ನು ಹೊತ್ತುಕೊಂಡರೆ, ಲೆಬನಾನ್ ಅಧ್ಯಕ್ಷ ಜೋಸೆಫ್ ಔನ್ ದಕ್ಷಿಣದಲ್ಲಿ ಸೇತುವೆಗಳ ಮೇಲೆ ಇಸ್ರೆಲ್ ಹೊಸ ಗುರಿಯನ್ನು ನೆಲದ ಆಕ್ರಮಣಕ್ಕೆ ಮುನ್ನುಡಿ ಎಂದು ಕರೆದರು.

ಇರಾನ್ ಮತ್ತು ಹೆಜ್ಬೊಲ್ಲಾ ವಿರುದ್ಧ ನಮಗೆ ಹೆಚ್ಚಿನ ವಾರಗಳ ಹೋರಾಟ ನಿರೀಕ್ಷಿಸಲಾಗಿದೆ ಎಂದು ಇಸ್ರೆಲಿ ಮಿಲಿಟರಿ ವಕ್ತಾರ ಬ್ರಿಗೇಡಿಯರ್ ಜನರಲ್ ಎಫೀ ಡೆಫ್ರಿನ್ ಹೇಳಿದರು.ಇರಾನ್ ಪರ್ಷಿಯನ್ ಕೊಲ್ಲಿಯನ್ನು ಪ್ರಪಂಚದ ಉಳಿದ ಭಾಗಗಳಿಗೆ ಸಂಪರ್ಕಿಸುವ ಹಾರ್ಮುಜ್ ಜಲಸಂಧಿಯನ್ನು ಪರಿಣಾಮಕಾರಿಯಾಗಿ ಮುಚ್ಚಿದೆ, ಆದರೆ ತನ್ನ ಶತ್ರುಗಳನ್ನು ಹೊರತುಪಡಿಸಿ ಇತರ ದೇಶಗಳ ಹಡಗುಗಳಿಗೆ ಸುರಕ್ಷಿತ ಮಾರ್ಗವನ್ನು ಹೇಳಿಕೊಂಡಿದೆ. ಜಾಗತಿಕ ತೈಲ ಪೂರೈಕೆಯ ಸರಿಸುಮಾರು ಐದನೇ ಒಂದು ಭಾಗವು ಅದರ ಮೂಲಕ ಹಾದುಹೋಗುತ್ತದೆ, ಆದರೆ ಹಡಗುಗಳ ಮೇಲಿನ ದಾಳಿಗಳು ಬಹುತೇಕ ಎಲ್ಲಾ ಟ್ಯಾಂಕರ್ ಸಂಚಾರವನ್ನು ನಿಲ್ಲಿಸಿವೆ.ಇರಾನ್ ಜಲಸಂಧಿಯನ್ನು ತೆರೆಯದಿದ್ದರೆ, ಅಮೆರಿಕವು ತನ್ನ ವಿವಿಧ ವಿದ್ಯುತ್ ಸ್ಥಾವರಗಳನ್ನು ನಾಶಪಡಿಸುತ್ತದೆ, ಮೊದಲು ಅತಿದೊಡ್ಡದರೊಂದಿಗೆ ಪ್ರಾರಂಭಿಸುತ್ತದೆ! ಎಂದು ಟ್ರಂಪ್ ಹೇಳಿದರು.ಇರಾನ್‌ನ ಕ್ರಾಂತಿಕಾರಿ ಗಾರ್ಡ್ ದೇಶದ ಹೆಚ್ಚಿನ ಮೂಲಸೌಕರ್ಯವನ್ನು ನಿಯಂತ್ರಿಸುತ್ತದೆ ಮತ್ತು ಯುದ್ಧ ಪ್ರಯತ್ನಕ್ಕೆ ಶಕ್ತಿ ತುಂಬಲು ಅದನ್ನು ಬಳಸುತ್ತದೆ ಎಂದು ಅಮೆರಿಕ ವಾದಿಸಿದೆ. ಅಂತರರಾಷ್ಟ್ರೀಯ ಕಾನೂನಿನಡಿಯಲ್ಲಿ, ನಾಗರಿಕರಿಗೆ ಪ್ರಯೋಜನಕಾರಿಯಾದ ವಿದ್ಯುತ್ ಸ್ಥಾವರಗಳನ್ನು ಮಿಲಿಟರಿ ಪ್ರಯೋಜನವು ಅವರಿಗೆ ಉಂಟುಮಾಡುವ ನೋವುಗಳಿಗಿಂತ ಹೆಚ್ಚಿದ್ದರೆ ಮಾತ್ರ ಗುರಿಯಾಗಿಸಬಹುದು ಎಂದು ಕಾನೂನು ವಿದ್ವಾಂಸರು ಹೇಳುತ್ತಾರೆ.

ಇರಾನ್‌ನ ಸಂಸತ್ತಿನ ಸ್ಪಿಕರ್ ಮೊಹಮ್ಮದ್ ಬಘರ್ ಖಲಿಬಾಫ್ ನಲ್ಲಿ ಪ್ರತಿಕ್ರಿಯಿಸಿ, ಇರಾನ್‌ನ ವಿದ್ಯುತ್ ಸ್ಥಾವರಗಳು ಮತ್ತು ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡರೆ, ಗಲ್ಫ್ ರಾಷ್ಟ್ರಗಳಲ್ಲಿ ಕುಡಿಯುವ ನೀರಿಗೆ ನಿರ್ಣಾಯಕವಾದ ಇಂಧನ ಮತ್ತು ಉಪ್ಪುನೀರಿನ ನಿರ್ಮೂಲನ ಸೌಲಭ್ಯಗಳು ಸೇರಿದಂತೆ ಪ್ರದೇಶದಾದ್ಯಂತದ ಪ್ರಮುಖ ಮೂಲಸೌಕರ್ಯಗಳನ್ನು ಕಾನೂನುಬದ್ಧ ಗುರಿಗಳೆಂದು ಪರಿಗಣಿಸಲಾಗುತ್ತದೆ ಮತ್ತು ಬದಲಾಯಿಸಲಾಗದಂತೆ ನಾಶವಾಗುತ್ತದೆ ಎಂದು ಖಲಿಬಾಫ್ ನಂತರ ಹೇಳಿದರು.ಯುಎಸ್ ಮಿಲಿಟರಿ ಬಜೆಟ್‌ಗೆ ಹಣಕಾಸು ಒದಗಿಸುವ ಘಟಕಗಳು ಕಾನೂನುಬದ್ಧ ಗುರಿಗಳಾಗಿವೆ ಎಂದು ಖಲಿಬಾಫ್ ನಂತರ ಹೇಳಿದರು.ವಿದ್ಯುತ್ ಸ್ಥಾವರಗಳ ಮೇಲಿನ ದಾಳಿಗಳು ಅಂತರ್ಗತವಾಗಿ ವಿವೇಚನಾರಹಿತ ಮತ್ತು ಸ್ಪಷ್ಟವಾಗಿ ಅಸಮಾನ ಮತ್ತು ಯುದ್ಧ ಅಪರಾಧ ಎಂದು ಇರಾನ್‌ನ ವಿಶ್ವಸಂಸ್ಥೆಯ ರಾಯಭಾರಿ ಭದ್ರತಾ ಮಂಡಳಿಗೆ ಬರೆದಿದ್ದಾರೆ ಎಂದು ಸರ್ಕಾರಿ ಸ್ವಾಮ್ಯದ ಐಆರ್‌ಎನ್‌ಎ ಸುದ್ದಿ ಸಂಸ್ಥೆ ತಿಳಿಸಿದೆ.

# ಸ್ತ್ರೀ ಪುರುಷರಿಬ್ಬರಿಗೂ ಸಮಾನ ಸ್ಥಾನಮಾನಗಳಿದ್ದಾಗ ಮಾತ್ರ ಸಮ ಸಮಾಜ ಕಟ್ಟಲು ಸಾಧ್ಯ:ಡಾ. ರಂಜಿತಾ

**ವಿಜಯಪುರ, ಮಾ. 23:**ನಗರದ ಬಿ. ಎಲ್.ಡಿ.ಇ.ಸಂಸ್ಥೆಯ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಪ್ರಶಿಕ್ಷಣಾರ್ಥಿನಿ ಚಂದನಾ ಶೃಂಗೇರಿ ಅವರು ಭರತನಾಟ್ಯ ಮಾಡುವುದರೊಂದಿಗೆ ಅಂತರ್ ರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು.
"ವೀರಾಂಗನ ಸಾವಿತ್ರಿಬಾಯಿ ಫುಲೆ ರಾಷ್ಟ್ರೀಯ ಪ್ರಶಸ್ತಿ" ಪಡೆದಿದ್ದಕ್ಕಾಗಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಭಾರತಿ. ವಾಯ್.ಖಾಸನೀಸ ಮತ್ತು ಪ್ರೆಸಿಡೆನ್ಸಿ ಬಿ. ಇಡಿ ಕಾಲೇಜ್ ಪ್ರಾಚಾರ್ಯ ಡಾ.ಸುಮಾ. ಬೋಳರಡ್ಡಿ ಇವರಿಗೆ ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು.

ಮುಖ್ಯ ಅತಿಥಿ ನ್ಯಾಯವಾದಿ ಡಾ.ರಂಜಿತಾ.ಕೆ.ಆರ್ ಅವರು ಮಾತನಾಡಿ, "ದಶಪುತ್ರ ಸಮ ಕನ್ಯಾ" ಅಂದರೆ ಹತ್ತು ಗಂಡು ಮಕ್ಕಳಿಗೆ ಒಂದು ಹೆಣ್ಣು ಮಗು ಸಮ ಎಂಬ ಭಗವದ್ಗೀತೆಯ ವಾಣಿಯಂತೆ ಮಹಿಳೆಯ ಸ್ಥಾನ ಬಹಳಷ್ಟು ಗೌರವಯುತವಾದದ್ದು. ಮಹಿಳೆಯು ಅಬಲೆಯಲ್ಲ. ಆಕೆ ಪುರಾಣ ಕಾಲದಿಂದಲೇ ಶಕ್ತಿ ಶಾಲಿಯಾಗಿದ್ದಾಳೆ. ಸ್ತ್ರೀಪುರುಷರಿಬ್ಬರಿಗೂ ಸಮಾನ ಸ್ಥಾನಮಾನಗಳು ಇದ್ದಾಗ ಮಾತ್ರ ಸಮ ಸಮಾಜ ಕಟ್ಟಲು ಸಾಧ್ಯ ಎಂದು ಹೇಳಿದರು.
ಪ್ರೆಸಿಡೆನ್ಸಿ ಬಿ. ಇಡಿ ಕಾಲೇಜ್ ಪ್ರಾಚಾರ್ಯ ಡಾ.ಸುಮಾ ಬೋಳರಡ್ಡಿ ಅವರು ಮಾತನಾಡಿ, ಹೆಣ್ಣು ಅಂದರೆ ಪ್ರೀತಿ, ವಾತ್ಸಲ್ಯ, ಅಕ್ಕರೆ, ತಾಯಿ, ಲಕ್ಷ್ಮಿ ಆಗಿದ್ದಾಳೆ ಎಂದು ಹೇಳಿದರು.
ಒಂದು ಮಗುವಿನ ಬೆಳವಣಿಗೆಯಲ್ಲಿ ತಾಯಿಯ ವಾತ್ಸಲ್ಯ ಬಹಳಷ್ಟು ಇರುತ್ತದೆ ಎಂದು ಹೇಳಿದರು.
ಪ್ರಾಚಾರ್ಯ ಡಾ.ಭಾರತಿ. ವಾಯ್.ಖಾಸನೀಸ್ ಅವರು ಮಾತನಾಡಿ,
ಜ್ಞಾನ, ಸಮಯ, ಬೆಂಬಲ ನೀಡಿ ಮಹಿಳಾ ಸಬಲೀಕರಣಕ್ಕೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಹೇಳಿದರು. ಪ್ರತಿಯೊಂದು ಕ್ಷೇತ್ರಗಳಲ್ಲಿಯೂ ಮಹಿಳೆ ಇದ್ದಾಳೆ. ಅಡುಗೆ ಮನೆಯಿಂದ ರಾಷ್ಟ್ರಪತಿ ಸ್ಥಾನದವರೆಗೂ ಮಹಿಳೆ ವಿಶೇಷ ಸಾಧನೆ ಮಾಡುತ್ತಿದ್ದಾಳೆ. ಆದ್ದರಿಂದ ಮಹಿಳಾ ಸಬಲೀಕರಣ ಎನ್ನುವುದು ಕೇವಲ ಮಹಿಳೆಯ ಒಂದು ವಿಷಯ ವಸ್ತುವಲ್ಲ. ಅದು ಸಮುದಾಯದ ವಿಷಯವಾಗಿದೆ ಎಂದು ಹೇಳಿದರು.

ಕೇವಲ ಶೇ.65.04 ರಷ್ಟು ಮಹಿಳೆಯರ ಸಾಕ್ಷರತಾ ಪ್ರಮಾಣವಿದ್ದು, ಶೇ.48ರಷ್ಟು



ಉನ್ನತ ಶಿಕ್ಷಣದಲ್ಲಿ ಮಹಿಳೆಯರಿದ್ದಾರೆ. ಹೀಗಾಗಿ ಶಿಕ್ಷಣ ಕ್ಷೇತ್ರದಲ್ಲಿ ಮಹಿಳೆಯರ ಸಾಕ್ಷರತಾ ಪ್ರಮಾಣ ಇನ್ನೂ ಹೆಚ್ಚಾಗಬೇಕು ಎಂದು ಕರೆ ನೀಡಿದರು. ಬಿ. ಎಲ್.ಡಿ.ಇ.ಸಂಸ್ಥೆ, ಎಸ್.ಎಸ್. ಆವರಣದ ಆಡಳಿತಾಧಿಕಾರಿ ಪ್ರೊ. ಐ ಎಸ್. ಕಾಳಪ್ಪನವರ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಹೆಣ್ಣು ಮಕ್ಕಳು ದೇವರು ಕೊಟ್ಟ ವರವಿದ್ದಂತೆ. ಅದೃಷ್ಟವಂತರಿಗೆ ಮಾತ್ರ ಹೆಣ್ಣು ಮಕ್ಕಳು ಹುಟ್ಟುತ್ತಾರೆ ಎಂದು ಹೇಳಿದರು. ಆರಂಭದಲ್ಲಿ ಮಹಿಳೆಯರಿಗೆ ಶಿಕ್ಷಣವಿರಲಿಲ್ಲ ನಿಜ. ಆದರೆ ಅವರು ಮೌಲ್ಯವಂತರಾಗಿರಲಿಲ್ಲ ಎಂದರ್ಥವಲ್ಲ. ಅವರು ಕಲಿಯದಿದ್ದರೂ ಜಾನಪದ ಸಾಹಿತ್ಯವನ್ನು ಅರಗಿಸಿ ಕೊಂಡವರಾಗಿದ್ದರು. ಭಾರತೀಯ ಸಂಸ್ಕೃತಿಯನ್ನು ಬೆಳಗುವವರಾಗಿದ್ದರು. ಇಂದಿನ ಆಧುನಿಕ ಯುಗದಲ್ಲಂತೂ ಮಹಿಳೆ ಗಗನದಾಚೆಗೂ ಸಾಧನೆ ಮಾಡುತ್ತಿದ್ದಾಳೆ ಎಂಬುವುದು ಹೆಮ್ಮೆಯ ಸಂಗತಿ. ಇದಕ್ಕೆ ಸಾಕ್ಷಿಯಾಗಿ ಅಂತರ್ ರಾಷ್ಟ್ರೀಯ ಮಹಿಳಾ ದಿನಾಚರಣೆಯಂದೇ ಆರ್.ಎಂ.ನಚಮ್ಮೆ ಅಣುಸ್ಥಾವರದ ಮೊದಲ ಮಹಿಳಾ ಮುಖ್ಯಸ್ಥರಾಗಿ ನೇಮಕಗೊಂಡಿರುವುದು ಅತ್ಯಂತ ಹೆಮ್ಮೆಯ ಸಂಗತಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಬೋಧಕ, ಬೋಧಕೇತರ ಸಿಬ್ಬಂದಿವರ್ಗ ಮತ್ತು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಸಂಶೋಧನ ವಿದ್ಯಾರ್ಥಿನಿ ಸುಜಾತ ಮತ್ತಿವಾಡ ನಿರೂಪಿಸಿದರು. ಲಕ್ಷ್ಮಿ ಡಗ್ಗಾ, ಐಶ್ವರ್ಯ ಜೋಶಿ ಹಾಗೂ ಸಂಗಡಿಗರು ಸಂಸ್ಥಾಪನ ಗೀತೆ ಪ್ರಸ್ತುತಪಡಿಸಿದರು. ಶಾಫಿಯಾ ರಮಲಿ ಸ್ವಾಗತಿಸಿದರು. ಶ್ರೇಯಾ ಡಂಗಿ ಪರಿಚಯಿಸಿದರು. ಡಾ. ಜೆ.ಎಸ್.ಪಟ್ಟಣಶೆಟ್ಟಿ ವಂದಿಸಿದರು.

# ದೊರನಹಳ್ಳಿ ಆಸ್ಪತ್ರೆ ಕಟ್ಟಡ ಕಳಪೆ ಕಾಮಗಾರಿ

ಯಾದಗಿರಿ:ಮಾ.23:ಶಹಾಪುರ ತಾಲೂಕಿನ ದೊರನಹಳ್ಳಿ ಪಟ್ಟಣದಲ್ಲಿ ನಿರ್ಮಾಣ ಹಂತದಲ್ಲಿರುವ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಹೊಸ ಕಟ್ಟಡ ಕಾಮಗಾರಿ ಕುರಿತು ಕಳಪೆ ಗುಣಮಟ್ಟದ ಗಂಭೀರ ಆರೋಪಗಳು ಕೇಳಿಬಂದಿದ್ದು, ಸಾರ್ವಜನಿಕ ವಲಯದಲ್ಲಿ ಆತಂಕ ಮತ್ತು ಆಕ್ರೋಶ ಉಲ್ಬಣಗೊಂಡಿದೆ.

ಸುಮಾರು ?6.50 ಕೋಟಿ ವೆಚ್ಚದಲ್ಲಿ ರೂಪುಗೊಳ್ಳುತ್ತಿರುವ ಈ ಬಹುಮಹಡಿ ಆಸ್ಪತ್ರೆ ಯೋಜನೆ 30ರಿಂದ 50 ಹಾಸಿಗೆಗಳ ಸೌಲಭ್ಯವನ್ನು ಒಳಗೊಂಡಿದ್ದು, ಗ್ರಾಮೀಣ ಭಾಗದ ಸಾವಿರಾರು ಜನರಿಗೆ ಮೂಲಭೂತ ಮತ್ತು ತುರ್ತು ಆರೋಗ್ಯ ಸೇವೆಗಳನ್ನು ಒದಗಿಸುವ ಉದ್ದೇಶ ಹೊಂದಿದೆ. ಆದರೆ ಕಾಮಗಾರಿ ಪ್ರಾರಂಭಿಕ ಹಂತದಲ್ಲೇ ಗುಣಮಟ್ಟದ ಬಗ್ಗೆ ಉದ್ಭವಿಸಿರುವ ಅನುಮಾನಗಳು ಯೋಜನೆಯ ಭವಿಷ್ಯವನ್ನೇ ಪ್ರಶ್ನಾರ್ಥಕವಾಗಿಸಿವೆ.

ಸ್ಥಳೀಯರು ವ್ಯಕ್ತಪಡಿಸಿದ ಆತಂಕದ ಪ್ರಕಾರ, ಕಟ್ಟಡ ನಿರ್ಮಾಣದಲ್ಲಿ ಬಳಸಲಾಗುತ್ತಿರುವ ಸಿಮೆಂಟ್, ಮರಳು ಹಾಗೂ ಇತರೆ ಮೂಲಭೂತ ಸಾಮಗ್ರಿಗಳು ತಾಂತ್ರಿಕ ಮಾನದಂಡಗಳಿಗೆ ಅನುಗುಣವಾಗಿಲ್ಲ ಎಂಬ ಆರೋಪ ಕೇಳಿಬಂದಿದೆ. ಇದರಿಂದ ಕಟ್ಟಡದ ಬಲಿಷ್ಠತೆ ಮತ್ತು ದೀರ್ಘಾವಧಿಯ ಸ್ಥಿರತೆ ಬಗ್ಗೆ ಅನುಮಾನ ಮೂಡಿದ್ದು, ಭವಿಷ್ಯದಲ್ಲಿ ರೋಗಿಗಳ ಸುರಕ್ಷತೆ ೨ಣಜಟಜಿ ಅಪಾಯಕ್ಕೆ ಒಳಗಾಗುವ ಭೀತಿ ವ್ಯಕ್ತವಾಗಿದೆ.

ಈ ಗಂಭೀರ ವಿಚಾರವನ್ನು ಮಾಧ್ಯಮಗಳು, ವಿಶೇಷವಾಗಿ ಸಂಜೆವಾಣಿ ಪತ್ರಿಕೆ, ನಿರಂತರವಾಗಿ ಬೆಳಕಿಗೆ ತರುತ್ತಿದ್ದರೂ ಸಂಬಂಧಿತ ಅಧಿಕಾರಿಗಳು ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದೇ ಮೌನ ವಹಿಸಿರುವುದು ಸಾರ್ವಜನಿಕರ ಅಸಮಾಧಾನವನ್ನು ಮತ್ತಷ್ಟು ಉಲ್ಬಣಗೊಳಿಸಿದೆ. ಸ್ಥಳ ಪರಿಶೀಲನೆ ಅಥವಾ ತಾಂತ್ರಿಕ ತನಿಖೆಯಿಲ್ಲದಿರುವುದು ಆಡಳಿತದ ಜವಾಬ್ದಾರಿತನದ ಮೇಲೆಯೇ ಪ್ರಶ್ನೆ ಎಬ್ಬಿಸಿದೆ.

"ಸುದ್ದಿಗಳು ನಿರಂತರವಾಗಿ ಪ್ರಕಟವಾಗುತ್ತಿದ್ದರೂ ಕ್ರಮವಿಲ್ಲದಿದ್ದರೆ, ಸಾಮಾನ್ಯ ಜನರು ನ್ಯಾಯಕ್ಕಾಗಿ ಯಾರನ್ನು ಸಂಪರ್ಕಿಸಬೇಕು?" ಎಂಬ ಪ್ರಶ್ನೆ ಗ್ರಾಮಸ್ಥರ ನಡುವೆ



ಗಂಭೀರವಾಗಿ ಕೇಳಿಬರುತ್ತಿದೆ.
ಕಾಮಗಾರಿ ನಿರಂತರವಾಗಿ ಮುಂದುವರಿಯುತ್ತಿರುವ ಹಿನ್ನೆಲೆ, ಸಂಬಂಧಿತ ಇಲಾಖೆಯ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಜೊತೆಗೆ, ದೋಷಪೂರಿತ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಿ, ತಪ್ಪಿತಸ್ಥ ಗುತ್ತಿಗೆದಾರರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂಬ ಬೇಡಿಕೆ ಕೂಡ ಕೇಳಿಬಂದಿದೆ.

ಗ್ರಾಮೀಣ ಆರೋಗ್ಯ ವ್ಯವಸ್ಥೆಗೆ ಬೆನ್ನೆಲುಬಾಗಬೇಕಾದ ಈ ಮಹತ್ವಾಕಾಂಕ್ಷಿ ಯೋಜನೆ ನಿರ್ಲಕ್ಷ್ಯದಿಂದ ಹಾನಿಗೊಳಗಾದರೆ, ಅದರ ಪರಿಣಾಮ ಸಾಮಾನ್ಯ ಜನರ ಜೀವನಮಟ್ಟದ ಮೇಲೆ ಗಂಭೀರವಾಗಿ ಬೀಳಲಿದೆ ಎಂಬ ಆತಂಕ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಸಾರ್ವಜನಿಕ ಹಣದ ಸಮರ್ಪಕ ಬಳಕೆ ಹಾಗೂ ಗುಣಮಟ್ಟದ ಕಾಮಗಾರಿ ಖಚಿತಪಡಿಸಿಕೊಳ್ಳುವುದು ಆಡಳಿತದ ತುರ್ತು ಕರ್ತವ್ಯವಾಗಿದ್ದು, ಇದರಲ್ಲಿ ವಿಫಲವಾದರೆ ಜನ ವಿಶ್ವಾಸಕ್ಕೆ ದೊಡ್ಡ ಹೊಡೆತ ಬೀಳಲಿದೆ.

# ಮಹಿಳೆ-ಪುರುಷ ಸಮಾನತೆ: ಪುರುಷರ ದಿನಾಚರಣೆಗೂ ಮಹತ್ವ ನೀಡಬೇಕು : ಯಶೋಧ ಕಟಕೆ

**ಕಲಬುರಗಿ;ಮಾ.23:** ಬೀದರ ಮತ್ತು ಕಲಬುರಗಿ ಜಿಲ್ಲೆಗಳ ಡಿಜಿಟಲ್ ಸಖಿ ಯೋಜನೆಯಡಿ, ಅಕ್ಸಸ್ ಲಿವಲಿಹೂಡ್ಸ್ ಹಾಗೂ ಎಲ್ ಅಂಡ್ ಟಿ ಫೈನಾನ್ಸ್ ಸಹಯೋಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ನಗರದ ಕನ್ನಡ ಭವನದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.
ಕಾರ್ಯಕ್ರಮವನ್ನು ರಾಘವೇಂದ್ರ ಪೊಲೀಸ್ ಸ್ಟೇಷನ್‌ನ ಪಿಎಸ್‌ಐ ಯಶೋಧ ಕಟಕೆ ಉದ್ಘಾಟಿಸಿ ಮಾತನಾಡಿ, "ಮಹಿಳೆ ಮತ್ತು ಪುರುಷರು ಸಮಾಜದ ಎರಡು ಕಣ್ಣುಗಳಂತೆ. ಇಬ್ಬರೂ ಸಮಾನರಾಗಿದ್ದು, ಮಹಿಳಾ ದಿನಾಚರಣೆಯ ಜೊತೆಗೆ ಪುರುಷರ ದಿನಾಚರಣೆಯನ್ನೂ ಆಚರಿಸುವುದು ಅಗತ್ಯ" ಎಂದು ಹೇಳಿದರು.



ಡಿಜಿಟಲ್ ಸಖಿ ಯೋಜನೆಯ ಕ್ಲಸ್ಟರ್ ಮ್ಯಾನೇಜರ್ ವಿಜಯಲಕ್ಷ್ಮಿ ಅವರು ಕಾರ್ಯಕ್ರಮದ ಪರಿಚಯ ನೀಡಿ ಯೋಜನೆಯ ಉದ್ದೇಶ ಮತ್ತು ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು. ಮುಖ್ಯ ಅತಿಥಿಗಳಾಗಿ ಅಡ್ವೋಕೇಟ್ ಶ್ರೀಮತಿ ರೇಣುಕಾ ಬಿರಾದಾರ್ ಹಾಗೂ ಬಸವ ಟ್ರೇಡರ್ಸ್ ಸಂಸ್ಥಾಪಕ ಮಹೇಶ್ ಗಿರಾಣಿ ಭಾಗವಹಿಸಿದ್ದರು. ಈ ವೇಳೆ ರೇಣುಕಾ ಬಿರಾದಾರ್ ಮಹಿಳಾ ಸಬಲೀಕರಣದ ಅಗತ್ಯತೆಯನ್ನು ವಿವರಿಸಿದರು.

ಅತಿಥಿಗಳಾಗಿ ಮಲ್ಲಮ್ಮ ಕಾಡ್ಲಾ, ವಿಜಯಲಕ್ಷ್ಮಿ ಆರ್ ಶೀಲವಂತ್, ಶ್ರೀಪಾದ ಕುಲಕರ್ಣಿ, ಗೋಪಾಲ್ ಕುಲಕರ್ಣಿ, ಕವಿತಾ ನಾಯ್ಡು ಹಾಗೂ ಜಯಶ್ರೀ ಎಸ್ ಮಠ್ ಉಪಸ್ಥಿತರಿದ್ದರು. ಶ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ಮಲ್ಲಮ್ಮ ಕಾಡ್ಲಾ ಅವರು ಡಿಜಿಟಲ್ ಸಖಿಗಳಿಗೆ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ ಮತ್ತು ಕಾನೂನು ಸೇವಾ ಪ್ರಾಧಿಕಾರದ ಕುರಿತು ಮಾಹಿತಿ ನೀಡಿದರು.
ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳಾ ಉದ್ಯಮಿಗಳನ್ನು ಸನ್ಮಾನಿಸಲಾಯಿತು. ಮಹಿಳೆಯರ ಹಕ್ಕುಗಳು, ಸಮಾನತೆ ಮತ್ತು ನ್ಯಾಯದ ಬಗ್ಗೆ ಜಾಗೃತಿ ಮೂಡಿಸುವ ಸಂದೇಶಗಳನ್ನು ನೀಡಲಾಯಿತು.
ಮಹಿಳೆಯರ ಮೇಲೆ ನಡೆಯುವ ಅನ್ಯಾಯ, ಹಿಂಸಾಚಾರ ಹಾಗೂ ಭೇದಭಾವವನ್ನು ತಡೆಯಲು ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಗಣ್ಯರು ಕರೆ ನೀಡಿದರು. ಸರ್ಕಾರದ ವಿವಿಧ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ಮಹಿಳೆಯರು ಆರ್ಥಿಕ ಹಾಗೂ ಸಾಮಾಜಿಕವಾಗಿ ಸದೃಢರಾಗಬೇಕು ಎಂದು ಸಲಹೆ ನೀಡಿದರು.
ಕಾರ್ಯಕ್ರಮದಲ್ಲಿ ಸ್ವಾಗತ ಭಾಷಣವನ್ನು ನಾಗರಾಜ್ ಹೆಂಬಾಡಿ ಮಾಡಿದರು. ನಿರೂಪಣೆಯನ್ನು ವಿಜಯಲಕ್ಷ್ಮಿ ಎಂ ಭರ್ಮಶೆಟ್ಟಿ ನಡೆಸಿದರು. ಕೊನೆಯಲ್ಲಿ ವಂದನಾರ್ಪಣೆಯನ್ನು ರವಿ ಕುಮಾರ್ ವಿ.ಬಿ ಸಲ್ಲಿಸಿದರು.
ಸಾರಾಂಶ:
ಮಹಿಳೆಯರು ತಮ್ಮ ಪರಿಶ್ರಮ ಮತ್ತು ಆತ್ಮವಿಶ್ವಾಸದ ಮೂಲಕ ಎಲ್ಲಾ ಕ್ಷೇತ್ರಗಳಲ್ಲಿ ಮುನ್ನಡೆಯುತ್ತಿದ್ದು, ಮಹಿಳಾ ಸಬಲೀಕರಣವು ಸಮಗ್ರ ಸಮಾಜದ ಅಭಿವೃದ್ಧಿಗೆ ಪ್ರಮುಖ ಶಕ್ತಿಯಾಗಿದೆ.

# ನಿತ್ಯ 10 ಸಾವಿರ ಸಿಲಿಂಡರ್ ಪೂರೈಕೆ



**ಬೆಂಗಳೂರು,ಮಾ.23**–ಪಶ್ಚಿಮ ಏಷ್ಯಾ ಸಂಘರ್ಷ ಹಿನ್ನೆಲೆಯಲ್ಲಿ ವಾಣಿಜ್ಯ ಬಳಕೆಯ ಸಿಲಿಂಡರ್ ಅಭಾವ ಎದುರಾದ ಹಿನ್ನೆಲೆಯಲ್ಲಿ ಪ್ರತಿ ನಿತ್ಯ 10 ಸಾವಿರ ಸಿಲಿಂಡರ್ ಪೂರೈಕೆಗೆ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದ್ದು ಹೀಗಾಗಿ ವಾಣಿಜ್ಯ ಬಳಕೆದಾರರು ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್ ಮುನಿಯಪ್ಪ ಇಂದಿಲ್ಲಿ ಹೇಳಿದ್ದಾರೆ.

ಕಳೆದ ವಾರ ಒಂದು ಸಾವಿರ ಸಿಲಿಂಡರ್ ಹೊಟೇಲ್ ಗೆ ನೀಡಲಾಗುತ್ತಿದೆ. ಸದ್ಯ ಹೊಟೇಲ್, ಡಾಬಾ, ಹಾಸ್ಟೆಲ್, ಇಂದಿರಾ ಕ್ಯಾಂಟೀನ್, ಆಸ್ಪತ್ರೆ ಗಳಿಗೆ ಪೂರೈಕೆ ಮಾಡಲು ಪ್ರತಿ ನಿತ್ಯ 10,000 ಕಮರ್ಷಿಯಲ್ ಸಿಲಿಂಡರ್ ಪೂರೈಕೆ ಮಾಡಲಾಗುವುದು ಹೀಗಾಗಿ ಗೇಲ್ ಕಂಪನಿಯೊಂದಿಗೆ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ ಎಂದಿದ್ದಾರೆ.
ಭಾರತೀಯ ತೈಲ ನಿಗಮ, ಹಿಂದೂಸ್ತಾನ ಪೆಟ್ರೋಲಿಯಂ, ಗೇಲ್, ಹಾಗೂ ಭಾರತ್ ಪೆಟ್ರೋಲಿಯಂ ಅಧಿಕಾರಿಗಳ ಜೊತೆ ಸಭೆ ನಡೆಸಿದ ಬಳಿಕ ಮಾಹಿತಿ ನೀಡಿದ ಅವರು ವಾಣಿಜ್ಯ ಬಳಕೆಯ ಸಿಲಿಂಡರ್ ಬಳಸುವ ಮಂದಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.
ಭಾರತೀಯ ಅನಿಲ ಪೂರೈಕೆ ಪ್ರಾಧಿಕಾರ ಗೇಲ್ ಕಂಪನಿಯಲ್ಲಿ ಒಂದು ವಾರದೊಳಗೆ ವಾಣಿಜ್ಯ ಸಿಲಿಂಡರ್ ಬಳಕೆದಾರರು ನೋಂದಣಿ ಮಾಡಿಕೊಳ್ಳಬೇಕು ಎಲ್ಲರೂ ಸಹಕಾರ ನೀಡಿದರೆ ಅಡುಗೆ ಅನಿಲ ಸಮಸ್ಯೆ ಬಗೆಹರಿಯಲಿದೆ ಎಂದು ಮಾಹಿತಿ ನೀಡಿದ್ದಾರೆ.

**ಗೇಲ್ ಕಂಪನಿ ಜತೆ ನೋಂದಣಿ ಕಡ್ಡಾಯ**–ವಾಣಿಜ್ಯ ಸಿಲಿಂಡರ್ ಬಳಕೆದಾರರು ನೊಂದಣಿ ಮಾಡಿಕೊಳ್ಳದಿದ್ದರೆ ವಾಣಿಜ್ಯ ಬಳಕೆಯ ಸಿಲಿಂಡರ್ ಸಿಗುವುದಿಲ್ಲ. ಈ ಹಿನ್ನೆಲೆಯಲ್ಲಿ ಯಾರು ಎಷ್ಟು ಬಳಕೆ ಮಾಡ್ತಿದ್ದಾರೆ ಎನ್ನುವ ಮಾಹಿತಿಗಾಗಿ ಮುಂದಿನ ಶನಿವಾರದೊಳಗೆ ನೊಂದಣಿ ಕಡ್ಡಾಯವಾಗಿದೆ ಎಂದಿದ್ದಾರೆ.ಹೊಟೇಲ್ ಮಾಲೀಕರು ಪ್ರತಿ ಯೂನಿಟ್ ಗೆ 2 ರೂಪಾಯಿ ವಿದ್ಯುತ್ ಬಿಲ್ ಕಡಿಮೆ ಮಾಡುವ ವಿಚಾರ ತಮ್ಮ ಗಮನಕ್ಕೆಬಂದಿಲ್ಲ ಈ ವಿಷಯದ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಮಾಹಿತಿ ನೀಡಿದರು

**ಸಿಎಂ ಎರಡನೇ ಪತ್ರಕ್ಕೆ ಸ್ಪಂದನೆ;**–ಕೇಂದ್ರ ಸರ್ಕಾರ ನೀಡುತ್ತಿದ್ದ 9000 ಸಿಲಿಂಡರ್ ಸಂಖ್ಯೆ ಏರಿಕೆ ಮಾಡಿದ್ದು ಪ್ರತಿನಿತ್ಯ ರಾಜ್ಯಕ್ಕೆ 10,000 ಸಿಲಿಂಡರ್ ನೀಡಲಿದೆ. ವಿನಾಕಾರಣ ಅನಿಲ ವಿತರಣೆ ಮಾಡುವವರ ಮೇಲೆ ಯಾರು ಒತ್ತಡ ಏರಬಾರದು. ಸದ್ಯ ಎದುರಾಗಿರುವ ಸಮಸ್ಯೆಗೆ ಎಲ್ಲರ ಸಹಕಾರ ಅಗತ್ಯ ಎಂದರು.ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಿಲಿಂಡರ್ ಅ ಭಾವದ ಕುರಿತು ಕೇಂದ್ರಕ್ಕೆ ಎರಡನೇ ಪತ್ರ ಬರೆದ ಬಳಿಕ ಇದೀಗ ಕೇಂದ್ರ ಸರ್ಕಾರ ಸ್ಪಂದನೆ ನೀಡಿದ್ದು, ಇದುವರೆಗೂ 9,000 ಸಿಲಿಂಡರ್ ಪೂರೈಕೆ ಮಾಡುತ್ತಿದ್ದು ಇದೀಗ ಹೆಚ್ಚುವರಿ ಶೇ. 20 ರಷ್ಟು ಸಿಲಿಂಡರ್ ಕೊಡಲು ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದೆ ಎಂದರು.
ನಿತ್ಯ ರಾಜ್ಯಕ್ಕೆ 10,000 ಕಮರ್ಷಿಯಲ್ ಸಿಲಿಂಡರ್ ಸಿಗಲಿದೆ. ಮುಂದಿನ ಸೋಮವಾರ ಮತ್ತೊಮ್ಮೆ ಸಭೆ ಸೇರಿ ಪರಾಮರ್ಶೆ ನಡೆಸಲಾಗುವುದು ಗೃಹ ಬಳಕೆ ಅನಿಲ ಸಿಲಿಂಡರ್ ಗೆ 25 ದಿನ ಅವಕಾಶ ಕೊಟ್ಟಿದ್ದೇವೆ ಎಂದು ತಿಳಿಸಿದರು.

**ಹೋಟೆಲ್ ಉದ್ಯಮಕ್ಕೆ ನಿರಾಸೆ–** ಬೇಡಿಕೆ ಇಟ್ಟಷ್ಟು ಪೂರೈಕೆ ಆಗಿಲ್ಲ ಕಳೆದ ಬಾರಿ 7 ಸಾವಿರ ವಾಣಿಜ್ಯ ಸಿಲಿಂಡರ್ ಗೆ ಅನುಮೋದನೆ ನೀಡಲಾಗಿತ್ತು. ಈ ಬಾರಿ 16 ಸಾವಿರದ 105 ಸಿಲಿಂಡರ್ ಪೂರೈಕೆ ಮಾಡಲಾಗಿದ್ದು ಈ ಪೈಕಿ ಶಿಕ್ಷಣ ಸಂಸ್ಥೆಗಳಿಗೆ / ಆಸ್ಪತ್ರೆಗೆ 4200 ಸಿಲಿಂಡರ್ ನೀಡಲಾಗಿದೆವಿಮಾನ ನಿಲ್ದಾಣ ,ರೈಲ್ವೆ ಕ್ಯಾಂಟಿನ್ ಸರ್ಕಾರಿ ಸಂಸ್ಥೆಗಳಿಗೆ 1200, ಹೋಟೆಲ್, ಡಾಬಾ ರೆಸ್ಟೋರೆಂಟ್, ಇಂಡಸ್ಟ್ರಿಯಲ್ ಕ್ಯಾಂಟಿನ್ ,ಕೆಎಂಫ್, ಇಂದಿರಾ ಕ್ಯಾಂಟೀನ್ , ಪಿಜಿ , ಕಾರ್ಪೊರೇಟ್ ಕ್ಯಾಂಟಿನ್ , ಸ್ಪೋರ್ಟ್ ಹಾಸ್ಟೆಲ್ ಸೇರಿದಂತೆ ಇತರೆ 10 ಸಾವಿರ ಸಿಲಿಂಡರ್ ನೀಡಲಾಗಿದೆ.

# 26 ರಿಂದ ಮಳಖೇಡ ದರ್ಗಾದ ಉರ್ಸ್ ಆರಂಭ: ಹಜರತ್ ಸೈಯದ್ ಶಾಹ ಮುಸ್ತಾಪ ಖಾದ್ರಿ








**ಸೇಡಂ,ಮಾ,23:** ಕಲ್ಯಾಣ ಕರ್ನಾಟಕದ ಭಾವೈಕ್ಯತೆಯ ಸಂಗಮದ ನೆಲೆಯಾಗಿರುವ ರಾಷ್ಟ್ರಕೂಟ ರಾಜಧಾನಿಯ ಮಳಖೇಡ ಗ್ರಾಮದಲ್ಲಿರುವ ಹಜರತ್ ಸೈಯದ್ ಶಾಹ ಖಲಿಪತ್ ಉರ್ ರಹಮಾನ್ ಖಾದ್ರಿ ರವರ 141ನೇ ಹಾಗೂ ಹಜರತ್ ಹಲಹಜ್ ಸೈಯದ್ ನೇಮತುಲ್ಲಾ ಖಾದ್ರಿ ಅಲ್ ಜಿಲಿ ರವರ 21ನೇ ಉರ್ಸ್ (ಜಾತ್ರೆ) ನಿಮಿತ್ಯವಾಗಿ ಎನ್, ಆರ್, ಅಖಿಲ ಭಾರತ ಮಾನವ ಧರ್ಮ ಸೇವಾ ಟ್ರಸ್ಟ್ ಆಶ್ರಯದಲ್ಲಿ ಮಾರ್ಚ್ 26 –3–26 ರಿಂದ 29–3–26 ರವರೆಗೆ ಜಾತ್ರೆ ಬಹು ವಿಜೃಂಭಣೆಯಿಂದ ಜರುಗಲಿದೆ ಎಂದು ಮಳಖೇಡ ದರ್ಗಾದ ಪೀಠಾಧಿಪತಿಗಳಾದ ಹಜರತ್ ಸೈಯದ್ ಶಾಹ ಮುಸ್ತಾಪ ಖಾದ್ರಿ ಬಾಬಾರವರು ಹೇಳಿದರು.ತಾಲೂಕಿನ ಮಳಖೇಡ ಗ್ರಾಮದಲ್ಲಿರುವ ದರ್ಗಾದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಬಾಬಾರವರು ಶನಿವಾರ 28– 3 –2026 ರಂದು ರಾತ್ರಿ 8:30 ಗಂಟೆಗೆ ನಡಿಯಲಿರುವ ಮಾನವ ಧರ್ಮ ಚಿಂತನ ಸಭೆಯಲ್ಲಿ ಮುಖ್ಯ ಅತಿಥಿಗಳಾಗಿ ಶ್ರೀ ಶರಣಬಸವೇಶ್ವರ ದೇವಸ್ಥಾನದ 9ನೇ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಚಿರಂಜೀವಿ ದೊಡ್ಡಪ್ಪ ಅಪ್ಪ, ದೇವಸ್ಥಾನದ ಕಾರ್ಯದರ್ಶಿಗಳಾದ ಬಸವರಾಜ್ ದೇಶಮುಖ್, ಸಚಿವರಾದ ಪ್ರಿಯಾಂಕ್ ಖರ್ಗೆ, ಡಾ.ಶರಣಪ್ರಕಾಶ ಪಾಟೀಲ್ ಊಡಗಿ, ಶರಣಬಸಪ್ಪ ದರ್ಶನಪುರ್, ಕಲ್ಯಾಣ ಕರ್ನಾಟಕ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಡಾ. ಅಜಯ್ ಸಿಂಗ್, ಹಾಗೂ ಶಾಸಕರಾದ ಬಿ ಆರ್ ಪಾಟೀಲ್, ಅಲ್ಲಮಪ್ರಭು ಪಾಟೀಲ್, ರಾಜುಗೌಡ ಪಾಟೀಲ್, ಬಸವರಾಜ್ ಮತ್ತಿಮೂಡ, ವಿಧಾನಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕ್ನೂರ್, ಮಾಜಿ ಶಾಸಕರಾದ ರಾಜಕುಮಾರ್ ಪಾಟೀಲ್ ತೆಲ್ಕೂರ್, ಅಶೋಕ್ ಶಹಾಬಾದಿ, ಜೆಡಿಎಸ್ ನ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ್, ರಾಜಶ್ರೀ ಸಿಮೆಂಟ್ ಕಂಪನಿಯ ಯುನಿಟ್ ಹೆಡ್ ಉದಯಕುಮಾರ್ ಪವಾರ್, ಉಪಾಧ್ಯಕ್ಷ ಅಶೋಕ್ ಮೆನೋನ್, ಮತ್ತು ಪಿಡಿಎ ಇಂಜಿನಿಯರ್ ಕಾಲೇಜಿನ ಪ್ರೋಫೆಸರ್ ಸಂಜಯ್ ಮಾಕಲ್, ಸಾಮಾಜಿಕ ಕಾರ್ಯಕರ್ತ ಗುರುಮಿತ ಸಿಂಗ್ ಸಲೋಜ, ಎಸ್ ಬಿ ಆರ್ಟ್ಸ್ ಕಾಲೇಜಿನ ಪ್ರಾಚಾರ್ಯರಾದ ಡಾ. ಸುರೇಶ್ ಕುಮಾರ್ ನಂದಗಾವ್, ಆಗಮಿಸುತ್ತಿರುವುದರ ಜೊತೆಗೆ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಲಿರುವ ಪೂಜ್ಯರಾದ ಷ ಬ್ರ ರೇವಣಸಿದ್ದ ಮಹಾಸ್ವಾಮಿ, ರುದ್ರಮುನಿ ಶಿವಾಚಾರ್ಯರು, ಸೋಮಶೇಖರ ಶಿವಾಚಾರ್ಯರು, ಶಿವಮೂರ್ತಿ ಶಿವಾಚಾರ್ಯರು, ಚಂದ್ರಗುಂಡ ಶಿವಾಚಾರ್ಯರು, ಮುನೇಂದ್ರ ಶಿವಾಚಾರ್ಯರು, ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯರು, ಗುರುಮೂರ್ತಿ ಶಿವಾಚಾರ್ಯರು, ಕೊಟ್ರೇಶ್ವರ ಶಿವಾಚಾರ್ಯರು, ಡಾ. ತ್ರಿಮೂರ್ತಿ ಶಿವಾಚಾರ್ಯರು, ಚಂದ್ರಶೇಖರ್ ಶಿವಾಚಾರ್ಯರು, ಸಿದ್ಧವೀರ ಶಿವಾಚಾರ್ಯರು, ಅಪ್ಪರಾವ್ ದೇವಿ ಮುತ್ಯಾ, ಚರಲಿಂಗೇಶ್ವರ ಮಹಾಸ್ವಾಮಿ, ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿ, ಕಾಳಹಸ್ತೇಂದ್ರ ಮಹಾಸ್ವಾಮಿ, ಚಿಕ್ಕನಂಜೇಶ್ವರ ಮಹಾಸ್ವಾಮಿ, ಗುರುಲಿಂಗ ಮಹಾಸ್ವಾಮಿ, ಕೊರಣೇಶ್ವರ ಮಹಾಸ್ವಾಮಿ, ಪಂಚಾಕ್ಷರಿ ಮಹಾಸ್ವಾಮಿ, ಮಲ್ಲಯ ಮಹಾಸ್ವಾಮಿ, ಮಲ್ಲಣ್ಣಪ್ಪ ಮಹಾರಾಜರು, ಹಾಗೂ ವಿವಿಧ ದರ್ಗಾಗಳ ಬಾಬರಾದ ಹಜರತ್ ಸಯ್ಯದ್ ಶಹ ಮಹಮ್ಮದ್ ಅಲಿ ಅಲ್ ಹುಸೇನಿ, ಹಜರತ್ ಸೈಯದ್ ಶಾಹ ಯದುಲಾ ಹುಸೇನಿ, ಇಸ್ಲಾಮುದ್ದೀನ್ ಖಾದ್ರಿ, ಅಬ್ಜಲುದ್ದೀನ್ ಜುನೇಧಿ, ಜಲಾಲ್ ಹುಸೇನಿ, ಇಸ್ಮಾಯಿಲ್ ಹುಸೇನಿ, ಹಿದಾಯತ್ ಉಲ್ಲಾ ಖಾದ್ರಿ, ಮುತುರ್ಜಾ ಹುಸೇನಿ ಅಲ್ಲ ಖಾದ್ರಿ, ಮೈನುದ್ದೀನ್ ಹುಸೇನಿ, ಮಹಮ್ಮದ್ ಸದ್ರೋದ್ದೀನ್ ಜಂಜಾನಿ, ಅನ್ವರ್ ಹುಸೇನಿ ಖಾದ್ರಿ, ಅಬಿದ್ ಖಾದ್ರಿ, ಮೌಲಾನ ಅಬ್ದುಲ್ ಹಕ್ಕಿಮ್ ವಿಖಾರ್ ಅಶ್ರಪಿ, ಅಬ್ದುಲ್ ಫೈಜ್ ಉಸೇನಿ, ದಿವ್ಯ ಸಾನಿಧ್ಯ ವಹಿಸಲಿದ್ದಾರೆ ವಿವರವಾಗಿ ಬಾಬಾರವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ವಕೀಲರಾದ ರಾಜೇ ಶಿವಶರಣಪ್ಪ ಬಿಜನಳ್ಳಿ, ಸುಭಾಷ್ ಚಂದ್ರ ನರೋಣ,ಮಲ್ಲಪ್ಪ ಅರಬೋಳ,ಭಗವಾನ್ ಬೋಚಿನ್, ಪೀರಪ್ಪ ಕಡ್ಲಿ, ಕುಪ್ಪಣ್ಣ ಎಮ್ಮಿ ಇದ್ದರು.

ಉರ್ಸ್ (ಜಾತ್ರೆ) ಕಾರ್ಯಕ್ರಮ ವಿವರ: ಮಾರ್ಚ್ 26ರಂದು ಗುರುವಾರ ಪ್ರಾರ್ಥನೆ (ಗುಸುಲ್ ಶರೀಫ್) ಮಾರ್ಚ್ 27ರಂದು ಶುಕ್ರವಾರ (ಸಂದಲ್) ಮಳಖೇಡ,ಹೂಡಾ.ಬಿ, ಸಂಗಾವಿ, ಮಳಖೇಡ ರೈಲ್ವೆ ಸ್ಟೇಷನ್, ರಾಜಶ್ರೀ ಸಿಮೆಂಟ್ ಫ್ಯಾಕ್ಟರಿ, ಕುನ್ನೂರ್, ಹಾಗೂ ದಿಗ್ಗಾಂವ್ ಗ್ರಾಮಗಳಿಂದ ಸಂದಲ್ ಮೆರವಣಿಗೆಯ ನಂತರ ಹಜರತ್ ಸೈಯದ್ ಶಾಹ ಮುಸ್ತಾಪ ಖಾದ್ರಿ ಬಾಬಾರವರಿಂದ ಅಮೃತ ಹಸ್ತದಿಂದ ಗಂದಲೇಪನ, ಮಾರ್ಚ್ 28ರಂದು ಶನಿವಾರ (ಚಿರಾಗಾಂ) ದೀಪಾಲಂಕಾರ ರಾತ್ರಿ 8:30 ಗಂಟೆಗೆ ಮಳಖೇಡದಿಂದ ಪಂಖಾ ಮೆರವಣಿಗೆ ಪೀಠಾಧಿಪತಿಗಳಾದ ಹಜರತ್ ಸೈಯದ್ ಶಾಹ ಮುಸ್ತಾಪ ಖಾದ್ರಿ ಇವರ ದಿವ್ಯ ಸಾನಿಧ್ಯದಲ್ಲಿ ಅಖಿಲ ಭಾರತ ಮಾನವ ಧರ್ಮ ಸೇವಾ ಟ್ರಸ್ಟ್ ಆಶ್ರಯದಲ್ಲಿ "ಮಾನವ ಧರ್ಮ ಚಿಂತನ ಸಭೆ"ನಂತರ ಖವ್ವಾಲಿ ಹಾಗೂ ಗೀಗಿ ಕಾರ್ಯಕ್ರಮಗಳು ಜರಗುವವು, ಹಾಗೂ ಮಾರ್ಚ್ 29 ರಂದು ರವಿವಾರ ಜಿಯಾರತ್ (ಫಾತೆಹಾ ಖಾನಿ) ಮುಂಜಾನೆ 7 ಗಂಟೆಗೆ ಫಾತೆಹಾ ಖಾನಿ, ಪುಷ್ಪಾರ್ಚನೆ, ನಂತರ ಹಜರತ್ ಸಜ್ಜಾದಾ ನಸೀನರವರ ಅಮೃತ ಹಸ್ತದಿಂದ ಪ್ರಸಾದ ವಿಸ್ತರಣೆ ಹಾಗೂ ಮಳಖೇಡ ಹಾಗೂ ಹೂಡಾ (ಬಿ) ಭಕ್ತರರಿಂದ ಬೆಳ್ಳಿ ಕಡೆಗಳು ಹಾಗೂ ಬೆಳ್ಳಿ ಗಧೆಯ ಕುಸ್ತಿ ಜರುಗಲಿದೆ.

# ಸಮಗ್ರ ಕೃಷಿ ಜೊತೆಗೆ ತೋಟಗಾರಿಕೆ ಬೆಳೆಗಳನ್ನು ಬೆಳೆದುಅಧಿಕ ಲಾಭ ಪಡೆಯಿರಿ:ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ




**ಬೀದರ, ಮಾ.23:** ಸಮಗ್ರ ಕೃಷಿ ಜೊತೆಗೆ ತೋಟಗಾರಿಕೆ, ತರಕಾರಿ ಹಾಗೂ ಪುಷ್ಪೋದ್ಯಮ ಬೆಳೆಗಳನ್ನು ಬೆಳೆದು ರೈತರು ವಿದೇಶಗಳಿಗೆ ರಫ್ತು ಮಾಡುವ ಮುಖಾಂತರ ಅಧಿಕ ಲಾಭವನ್ನು ಪಡೆಯಬೇಕೆಂದು ಬೀದರ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.
ಅವರು ರವಿವಾರ ಬೀದರನ ಚಟ್ನಳ್ಳಿ ಗ್ರಾಮದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ವತಿಯಿಂದ 84 ದಿನಗಳ ಕಾಲ ಹಮ್ಮಿಕೊಂಡ್ಡಿರುವ ತೋಟಗಾರಿಕೆ ಗ್ರಾಮೀಣ ತೋಟಗಾರಿಕೆ ಕಾರ್ಯನುಭವ ಶಿಬಿರದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ತೋಟಗಾರಿಕೆ ವಲಯವು ಹೆಚ್ಚಿನ ಪ್ರಾಮುಖ್ಯತೆ ಪಡೆದುಕೊಂಡಿದ್ದು, ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಕ್ಷೇತ್ರಗಳಲ್ಲಿ ಒಂದಾಗಿದೆ. ಸಮಗ್ರ ಕೃಷಿ ಜೊತೆಗೆ ತರಕಾರಿ ಹಾಗೂ ಪುಷ್ಪೋದ್ಯಮ ಬೆಳೆಗಳನ್ನು ಬೆಳೆದು ರೈತರು ವಿದೇಶಗಳಿಗೆ ರಫ್ತು ಮಾಡುವ ಮೂಲಕ ಅಧಿಕ ಲಾಭವನ್ನು ಕಂಡುಕೊಳ್ಳಬಹುದಾಗಿದೆ ಹಾಗೂ ಜೊತಜೊತೆಗೆ ಬೆಳೆದಿರುವ ಬೆಳೆಯನ್ನು ಹತ್ತಿರದ ಸೂಪರ್ ಮಾರ್ಕೆಟ್, ಡಿಜಿಟಲ್ ಮಾರ್ಟ ಕಡೆಗಳಲ್ಲಿ ಮಾರಟ ಮಾಡುವುದರಿಂದ ಉತ್ತಮ ಆದಾಯ ದೊರೆಯುತ್ತದೆ ಎಂದು ತಿಳಿಸಿದರು.

ರೈತರು ಮಾರುಕಟ್ಟೆ ಅನುಗುಣವಾಗಿ ತಮ್ಮ ಬೆಳೆಗಳನ್ನು ಶೀತಘಟಕಗಳಲ್ಲಿ ಸಂಗ್ರಹಿಸಿ ಇಟ್ಟು ಉತ್ತಮ ಆದಾಯ ವಪಡೆಯಬಹುದೆಂದು ತಿಳಿಸಿದರು. ಕೃಷಿಯಲ್ಲಿ ಕೃತಕಬುದ್ಧಿಮತ್ತೆ ಉಪಯೋಗಿಸಿ ತಮ್ಮ ತಾಕುಗಳನ್ನು ಅಭಿವೃದ್ಧಿಪಡಿಸಬಹುದೆಂದು ತಿಳಿಸಿದರು. ಚಟ್ನಳ್ಳಿ ಗ್ರಾಮದಲ್ಲಿ ಆನೇಕ ರೈತರು ಪ್ರಗತಿಪರ ರೈತರಾಗಿ ಹೊರಹುಮ್ಮಬೇಕೆಂದು ತಿಳಿಸಿದರು. ರೈತರು ಹಾಗೂ ವಿಧ್ಯಾರ್ಥಿಗಳು ಪರಸ್ಪರ ಸಂವಹನ ನಡೆಸುವುದರಿಂದ ಪ್ರಾಯೋಗಿಕ ಜ್ಞಾನ ದೊರಕುತ್ತದೆ ಎಂದರು.

ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ. ವಿ. ಪಾಟೀಲ್ ಮಾತನಾಡಿ, ರೈತರು ಸಮಗ್ರ ಕೃಷಿ ಅಳವಡಿಸಿಕೊಂಡು ತೋಟಗಾರಿಕೆ ಬೆಳೆಗಳನ್ನು ಬೆಳೆಯಬೇಕು. ಕೋಳಾರ್ (ಕೆ) ನಲ್ಲಿರುವ ತೋಟಗಾರಿಕೆ ಫಾರ್ಮನಲ್ಲಿ ವಿವಿಧ ತಳಿಗಳ ಬಹುವಾರ್ಷಿಕ ಹಣ್ಣು ಬೆಳೆಗಳನ್ನು ಬೆಳೆಸಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಸೌಲಭ್ಯ ಕಲ್ಪಿಸದಲ್ಲಿ ವಿಧ್ಯಾರ್ಥಿಗಳಿಗೆ ಕಲಿಕೆ ಹಾಗೂ ರೈತರಿಗೆ ಪ್ರಾಯೋಗಿಕವಾಗಿ ಉಪಯೋಗವಾಗುತ್ತದೆ.
ರೈತರು ಕಾಲಕ್ಕನುಗುಣವಾಗಿ ಬೆಳೆಗಳಲ್ಲಿ ಮಾರ್ಪಡು ಹೊಂದಿದಾಗ ಮಾತ್ರ ಉತ್ತಮ ಅಭಿವೃದ್ಧಿ ಸಾದ್ಯ. ರೈತರು ತಪ್ಪದೆ ತಮ್ಮ ತಾಕುಗಳ ಮಣ್ಣು ಪರೀಕ್ಷೆ ಮಾಡಿಸಿ, ಅದಕ್ಕೆ ಅನುಗುಣವಾಗಿ ಬೆಳೆಗಳ ಸೂಕ್ತ ತಳಿಗಳನ್ನು ಬೆಳೆಯುವುದರಿಂದ ಅಧಿಕ ಇಳುವರಿ ಪಡೆಯಬಹುದೆಂದು ಹೇಳಿದರು.

ತೋಟಗಾರಿಕಾ ಮಹಾವಿದ್ಯಾಲಯದ ವತಿಯಿಂದ ರೈತರಿಗೆ ನೆರವಾಗಲು ಚಟ್ನಳ್ಳಿ ಗ್ರಾಮದಲ್ಲಿ ರೈತ ಸಹಾಯ ಕೇಂದ್ರವನ್ನು ಉದ್ಘಾಟನೆಗೊಳಿಸಲಾಯಿತು. ಶಾಲೆಯ ಸುತ್ತಮುತ್ತ ಗಿಡ್ಡನ್ನು ನೆಡಲಾಯಿತು. ಹಾಗೂ ಪೌಷ್ಟಿಕ ಕೈತೋಟ ನಿರ್ಮಾಣ ಮಾಡಲಾಯಿತು.

ಈ ಸಂದರ್ಭದಲ್ಲಿ ತೋಟಗಾರಿಕೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಜಾನ್ಹವಿ, ತೋಟಗಾರಿಕೆ ಕಾಲೇಜಿನ ವತಿಯಿಂದ ಸಂಯೋಜಕರಾದ ಡಾ. ಹರೀಶ, ಡಾ. ಫಾರೂಕ್, ಡಾ. ವಿಜಯ ಮಹಾಂತೇಶ್, ಡಾ. ವಿ.ಪಿ. ಸಿಂಗ್, ಅಂಜನೇಯ, ಡಾ. ಅನುರಾಧ ಸೇರಿದಂತೆ ಚಟ್ನಳ್ಳಿ ಗ್ರಾಮದ ಮಹಾದೇವಿ ಮಲ್ಲಪ್ಪ, ವಿಜಯಕುಮಾರ್ ಸ್ವಾಮಿ, ಫಾಳೆಪ್ಪ ಚಟ್ನಳ್ಳಿ, ರಾಜರೆಡ್ಡಿ ಒಂಕಾರ್ ಕೆ. ಹಾಗೂ ಪ್ರಗತಿಪರ ರೈತರಾದ ಶಂಕ್ರರಪ್ಪ ಬಿರಾದರ್ ಮುಂತಾದವರು ಪಾಲ್ಗೊಂಡಿದ್ದರು. ಅಂತಿಮ ವರ್ಷದ ವಿದ್ಯಾರ್ಥಿನಿಯಾದ ಅಂಬಿಕ ಕಾರ್ಯಕ್ರಮದ ನಿರೂಪಣೆ ಹಾಗೂ ಚಿತ್ರಾ ಕಾರ್ಯಕ್ರಮದ ವಂದನಾರ್ಪಣೆ ಮಾಡಿದರು.

# ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರ ಬಹಳ ಮುಖ್ಯ: ವಿಶ್ವರಾದ್ಯ ಶಿವಾಚಾರ್ಯರು



**ಅಫಜಲಪುರ: ಮಾ.23:**ಮಕ್ಕಳಿಗೆ ಶಿಕ್ಷಣದ ಜೊತೆ ನೈತಿಕ ಮೌಲ್ಯಗಳು ಮತ್ತು ಸಂಸ್ಕಾರ ಬೆಳೆಸುವ ಅಗತ್ಯತೆ ಇದೆ. ಇಲ್ಲವಾದರೆ ಇಂದಿನ ಮಕ್ಕಳು ಸಮಾಜಕ್ಕೆ ಕಂಟಕಪ್ರಾಯವಾಗಲಿದ್ದಾರೆ ಎಂದು ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು ಕಳವಳ ವ್ಯಕ್ತಪಡಿಸಿದರು.ತಾಲೂಕಿನ ದೇಸಾಯಿ ಕಲ್ಲೂರ ಗ್ರಾಮದ ಸರಸ್ವತಿ ಹಿರಿಯ ಪ್ರಾಥಮಿಕ ಶಾಲೆಯ 12ನೇ ವಾರ್ಷಿಕೋತ್ಸವದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಇಂದಿನ ಯುವ ಪೀಳಿಗೆಗೆ ಕೇವಲ ಪುಸ್ತಕದ ಜ್ಞಾನ ಸಾಲದು, ಅವರಲ್ಲಿ ನೈತಿಕ ಮೌಲ್ಯಗಳು, ಶಿಸ್ತು ಮತ್ತು ಮಾನವೀಯತೆ ಬೆಳೆಸುವುದು ಅತ್ಯಗತ್ಯವಾಗಿದೆ. ಸಂಸ್ಕಾರವಿಲ್ಲದ ಶಿಕ್ಷಣ ಸಮಾಜಕ್ಕೆ ಅಪಾಯಕಾರಿಯಾಗಿದೆ ಎಂದು ಶ್ರೀಗಳು ತಿಳಿಸಿದರು.ಎಪಿಜೆ ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು ಪ್ರಾಚಾರ್ಯ ಶಿವಾನಂದ ಚಿಂಚೋಳಿ ಮಾತನಾಡಿ, ಶಿಕ್ಷಣ ಸಂಸ್ಥೆ ನಿರ್ಮಿಸಿ ಬೆಳೆಸುವುದು ಒಂದು ದೊಡ್ಡ ಸಾಧನೆ. ಸರಸ್ವತಿ ಹಿರಿಯ ಪ್ರಾಥಮಿಕ ಶಾಲೆ ಕಡಿಮೆ ಅವಧಿಯಲ್ಲಿ ಸ್ವಂತ ಕಟ್ಟಡ ನಿರ್ಮಿಸಿಕೊಂಡು ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದ ಅವರು ಸಂಸ್ಥೆಯ ಆಡಳಿತ ಮಂಡಳಿ ಮತ್ತು ಶಿಕ್ಷಕರ ಶ್ರಮದಿಂದ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.ಕಸಾಪ ಅಧ್ಯಕ್ಷೆ ಪ್ರಭಾವತಿ ಮೇತ್ರಿ ಮಾತನಾಡಿ, ಬೆಳೆಯುವ ಸಿರಿ ಮೊಳಕೆಯಲ್ಲಿ ಎನ್ನುವಂತೆ ಮಕ್ಕಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ನೈತಿಕ ಮೌಲ್ಯಗಳನ್ನು ಕಲಿಸಿದರೆ ನಾಳೆ ದೇಶಕ್ಕಾಗಿ ದೊಡ್ಡ ಆಸ್ತಿಯಾಗಿ ಹೊರ ಹೊಮ್ಮಲಿದ್ದಾರೆ. ಇಂತಹ ಕೆಲಸವನ್ನು ಸರಸ್ವತಿ ಶಿಕ್ಷಣ ಸಂಸ್ಥೆಯವರು ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಪ್ರಾಚಾರ್ಯ ರಮೇಶ ಗಂಗನಳ್ಳಿ ಮಾತನಾಡಿ, ಗ್ರಾಮೀಣ ಭಾಗದ ಜನರು ಮೌಢ್ಯಗಳಿಂದ ಹೊರಬಂದು ಮಕ್ಕಳ ಭವಿಷ್ಯ ರೂಪಿಸುವ ಕೆಲಸ ಮಾಡಬೇಕು. ಬರುವ ದಿನಗಳು ಇನ್ನಷ್ಟು ಸ್ಪರ್ಧಾತ್ಮಕವಾಗಿರಲಿವೆ ಹೀಗಾಗಿ ಎಲ್ಲಾ ಪಾಲಕರು ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದು ಸಲಹೆ ನೀಡಿದರು.ಈ ಸಂದರ್ಭದಲ್ಲಿ ಉದ್ಯಮಿ ಎಸ್.ವೈ ಪಾಟೀಲ್, ಸಿಆರ್‌ಸಿ ಸಿದ್ದಪ್ಪ ಬಿರಾದಾರ, ಪ್ರಮುಖರಾದ ವೇ. ಗುರುಪಾದಯ್ಯ ಚರಂತಿಮಠ, ಮಂಜೂರ ಪಟೇಲ್, ಸಿದ್ದಯ್ಯ ಆಕಾಶಮಠ, ಅಣವೀರಯ್ಯ ಮಠಪತಿ, ಬಸಯ್ಯ ಘೂಳನೂರ, ಭಾಗಣ್ಣ ಮ್ಯಾಕೇರಿ, ಬಸವರಾಜ ಚಿಂಚೋಳಿ, ಲಕ್ಷ್ಮೀಪುತ್ರ ಕಿರನಳ್ಳಿ, ಶ್ರೀದೇವಿ ಪಾಟೀಲ್, ದೇವು ಘಂಟೆ, ಗುರುಪಾದ ತಳವಾರ, ರೇಖಾ ಚಂದ್ರಕಾಂತ ನಾಯ್ಕೋಡಿ, ಶಿವುಕುಮಾರ ಚರಂತಿಮಠ, ದೇವಿಂದ್ರ ಹುಲ್ಲೂರ, ಶಾಮರಾವ್ ಡಕ್ಕಾ, ಸಿದ್ದಪ್ಪ ತಳವಾರ, ಭಾಗಪ್ಪ ತಳವಾರ, ಶ್ರೀಮಂತ ಮ್ಯಾಕೇರಿ, ಪ್ರಭಾವತಿ ವಗ್ದರ್ಗಿ ಹಾಗೂ ಶಿಕ್ಷಕರು ಸಿಬ್ಬಂದಿ ವರ್ಗದವರು ಇದ್ದರು.
ಕಳೆದ 14 ವರ್ಷಗಳಿಂದ ನಮ್ಮ ಮನೆಯಲ್ಲಿ ಟಿವಿ ಹಾಗೂ ಮೊಬೈಲ್ ಬಳಕೆಯನ್ನು ದೂರವಿಟ್ಟು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತಿದ್ದೇವೆ. ಅದರ ಪ್ರತಿಫಲವಾಗಿ ನಮ್ಮ ಮಕ್ಕಳು ಸಹ ಶ್ರದ್ಧೆಯಿಂದ ಓದುವ ಮೂಲಕ ಜೀವನದ ಪ್ರಮುಖ ಘಟ್ಟವಾಗಿರುವ ಎಸ್.ಎಸ್. ಎಲ್.ಸಿ ಮತ್ತು ದ್ವಿತೀಯ ಪಿಯುಸಿ ತರಗತಿಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಪ್ರಸ್ತುತ ರಾಜ್ಯದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚಿನ ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂದು ಹೇಳಲು ಒಬ್ಬ ತಂದೆಯಾಗಿ ನನಗೆ ಬಹಳ ಹೆಮ್ಮೆಯಾಗುತ್ತದೆ.
–ಮಲ್ಲಿಕಾರ್ಜುನ ಹಿರೇಮಠ
ಅಧ್ಯಕ್ಷರು, ಕಾರ್ಯನಿರತ ಪತ್ರಕರ್ತರ ಸಂಘ, ಅಫಜಲಪುರ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE